
EMAIL : dairyadadaari@gmail.com ಸಂಪುಟ: 01 ಸಂಚಿಕೆ: 99
ಬೆಲೆ ರೂ : 2.00
ರಾಯಚೂರು
ಪುಟ: 4

# ಧೈರ್ಯದ ದಾರಿ

ನಿಮ್ಮ ನಂಬಿಕೆಯ ಧ್ವನಿ
DAIRYADA DAARI NEWS PAPER
KANNADA DAILY NEWS PAPER
ಕನ್ನಡ ದಿನಪತ್ರಿಕೆ
DAIRYADA DAARI
RNI NO: KNKAN/25/A2795 ಬುಧವಾರ: 25-03-2026

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793

## ಕಿರಿಯ ಆರೋಗ್ಯ ನಿರೀಕ್ಷಕ ಅಧಿಕಾರಿಗಳಾದ ಶ್ರೀಮತಿ ಸುನಿತಾ ಸಜ್ಜನ್ ಅವರಿಗೆ ಹುಟ್ಟುಹಬ್ಬದ ಹಾರ್ದಿಕ ಶುಭಾಶಯಗಳು



ಧೈರ್ಯದ ದಾರಿ

**ಸಿರವಾರ :**ಸಿರವಾರ ಪಟ್ಟಣ ಪಂಚಾಯತ್‌ನ ಕಿರಿಯ ಆರೋಗ್ಯ ನಿರೀಕ್ಷಕ ಅಧಿಕಾರಿಗಳಾದ ಶ್ರೀಮತಿ ಸುನಿತಾ ಸಜ್ಜನ್ ಅವರಿಗೆ ಹುಟ್ಟುಹಬ್ಬದ ಹಾರ್ದಿಕ ಶುಭಾಶಯಗಳು!

ಶುಭಾಶಯದ ಸಂದೇಶ

ಭಾರತೀಯ ಮಾನವ ಹಕ್ಕುಗಳ ಪರಿಷತ್ ವತಿಯಿಂದ ತಮಗೆ ಜನ್ಮದಿನದ ಶುಭಾಶಯಗಳನ್ನು ಕೋರುತ್ತಾ, ಸಮಾಜದ ಆರೋಗ್ಯ ಮತ್ತು ಸ್ವಚ್ಛತೆಯನ್ನು ಕಾಪಾಡುವಲ್ಲಿ ತಾವು ತೋರುತ್ತಿರುವ ದಕ್ಷತೆ ಹಾಗೂ ಸೇವಾ ಮನೋಭಾವನೆ ಸದಾ ಹೀಗೆಯೇ ಮುಂದುವರಿಯಲಿ ಎಂದು ಹಾರೈಸುತ್ತೇವೆ. ನಿಮ್ಮ ಮುಂದಿನ ಜೀವನವು ಸುಖ, ಶಾಂತಿ, ಸಮೃದ್ಧಿ ಮತ್ತು ಉತ್ತಮ ಆರೋಗ್ಯದಿಂದ ಕೂಡಿರಲಿ ಎಂದು ಆಶಿಸುತ್ತೇವೆ.

ಶುಭ ಕೋರುವವರು:

ಭಾರತೀಯ ಮಾನವ ಹಕ್ಕುಗಳ ಪರಿಷತ್ ಜಿಲ್ಲಾಧ್ಯಕ್ಷರಾದ ಹಿದಾಯತ್ ಬಡೇಘರ್

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

# ಇ_ಖಾತಾ ವಿತರಣೆಯಲ್ಲಿ ಭ್ರಷ್ಟಾಚಾರ ದಾಖಲೆ ಪ್ರದರ್ಶಿಸಿದ ಅಶೋಕ್

**ಬೆಂಗಳೂರು, ಮಾ. 24–** ರಾಜಧಾನಿ ಬೆಂಗಳೂರಿನಲ್ಲಿ ಇ-ಖಾತೆ ವಿತರಣೆಯಲ್ಲಿ ನಡೆಯುತ್ತಿರುವ ಭ್ರಷ್ಟಾಚಾರವನ್ನು ವಿಧಾನಸಭೆಯಲ್ಲಿಂದು ಎಳೆ ಎಳೆಯಾಗಿ ಬಿಡಿಸಿಟ್ಟ ಪ್ರತಿಪಕ್ಷ ನಾಯಕ ಆರ್. ಅಶೋಕ್, ಭ್ರಷ್ಟಾಚಾರಕ್ಕೆ ಸಂಬಂಧಿಸಿದಂತೆ ದಾಖಲೆಗಳನ್ನು ಸದನದಲ್ಲಿ ಪ್ರದರ್ಶಿಸಿದರು.

ಬೆಂಗಳೂರು ನಗರದಲ್ಲಿ ಅಭಿವೃದ್ಧಿ ಕುಂಠಿತವಾಗಿರುವ ಬಗ್ಗೆ ನಿಯಮ 69 ರಡಿಯಲ್ಲಿ ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಬೆಂಗಳೂರಿನಲ್ಲಿ ಇ ಖಾತಾ ಹೆಸರಿನಲ್ಲಿ ದೊಡ್ಡ ಭ್ರಷ್ಟಾಚಾರ ನಡೆಯುತ್ತಿದೆ. ಲಂಚ ಕೊಡದೆ ಇ ಖಾತೆಗಳು ಆಗುತ್ತಿಲ್ಲ. ಇ ಖಾತೆ ಹೆಸರಿನಲ್ಲಿ ದೊಡ್ಡ ಮಟ್ಟದಲ್ಲಿ ವಸೂಲಿ ನಡೆದಿದೆ ಎಂದು ಹೇಳಿದರು.

ಈ ಹಿಂದೆ ನಾವು ಇ ಖಾತಾ ವಿತರಣೆಯಲ್ಲಿ ಭ್ರಷ್ಟಾಚಾರ ನಡೆದಿದೆ ಎಂದಾಗ ಬೆಂಗಳೂರು ನಗರಾಭಿವೃದ್ಧಿ ಸಚಿವರಾದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು, ಇದಕ್ಕೆ ದಾಖಲೆಗಳನ್ನು ಕೊಡಿ ಭ್ರಷ್ಟಾಚಾರ ನಡೆದಿದ್ದರೆ ಆ ಅಧಿಕಾರಿಯ ವಿರುದ್ಧ ಕ್ರಮ ಕೈಗೊಳ್ಳುತ್ತೇನೆ ಎಂದೆಲ್ಲಾ ವೀರಾವೇಷದಿಂದ ಮಾತನಾಡಿದ್ದರು.ನಾನು ಈಗ ಇ ಖಾತೆಯ ಭ್ರಷ್ಟಾಚಾರವನ್ನು ಸಾಕ್ಷಿ ಸಮೇತ ಇಡುತ್ತೇನೆ ಎಂದು ಹೇಳಿ, ಹೆಚ್‌ಬಿಆರ್ ಲೇಔಟ್‌ನಲ್ಲಿ ಬಿಡಿಎ ಯಿಂದ ಹರಾಜಿನಲ್ಲಿ ಮೂಲ ನಿವೇಶನ ಖರೀದಿಸಿದ ವ್ಯಕ್ತಿಯೊಬ್ಬರಿಗೆ ಇ ಖಾತಾ ನೀಡದೆ ಅದು ಇ ಖಾತಾ ಎಂದು ಹೇಳಿ ಫೋನ್ ಪೇ ಮೂಲಕ ಕಂದಾಯ ಅಧಿಕಾರಿ ರಮೇಶ್ ಬಾಬು ಹಣ ಪಡೆದಿರುವ ದಾಖಲೆಗಳನ್ನು ಸದನದಲ್ಲಿ ಪ್ರದರ್ಶಿಸಿದರು.



ಈ ನಿವೇಶನದ ಮಾಲೀಕರಿಗೆ ಕಂದಾಯ ಅಧಿಕಾರಿಗಳು 30 ಸಾವಿರ ರೂ. ಲಂಚದ ಬೇಡಿಕೆ ಇಟ್ಟಿದ್ದರು. 15 ಸಾವಿರ ರೂ ಫೋನ್ ಪೇ ಮೂಲಕ ರಮೇಶ್ ಬಾಬು ಹಾಕಿಸಿಕೊಂಡಿದ್ದಾರೆ. ನಂತರ ಅವರು ಕಡತನವನ್ನು ಉಪ ಆಯುಕ್ತರಿಗೆ ಕಳುಹಿಸುತ್ತಾರೆ. ಉಪ ಆಯುಕ್ತರು ಅದನ್ನು ರೆಜೆಕ್ಟ್ ಮಾಡುತ್ತಾರೆ. ಹಾಗೆ ಲಂಚ ಪಡೆದ ಅಧಿಕಾರಿ ಮೂರು ಬಾರಿ ನಿವೇಶನದಾರರಿಂದ ಅರ್ಜಿ ಹಾಕಿಸುತ್ತಾರೆ. ಆದರೆ ಇ ಖಾತೆ ಆಗುವುದಿಲ್ಲ. ನಂತರ ಲಂಚ ಪಡೆದ ಹಣವನ್ನು ಅವರು ಫೋನ್ ಪೇ ಮೂಲಕವೇ ಮಾಲೀಕರಿಗೆ ವಾಪಸ್ ಹಾಕಿರುವ ದಾಖಲೆಗಳನ್ನು ಅಶೋಕ್ ಸದನದಲ್ಲಿ ಪ್ರದರ್ಶಿಸಿದರು.

ಉಪಮುಖ್ಯಮಂತ್ರಿಗಳು ಸಾಕ್ಷಿ ಗುಡ್ಡೆ ಎಂದೆಲ್ಲಾ ಭಾಷಣ ಮಾಡುತ್ತಾರೆ ನಾನು ಈಗ ಲಂಚದ ಸಾಕ್ಷಿ ಗುಡ್ಡೆಗಳನ್ನು ನೀಡಿದ್ದೇನೆ. ಬಿಬಿಎಂಪಿಯಚಲ್ಲಿ ಲಂಚವಿಲ್ಲದೆ ಏನೂ ಆಗುವುದಿಲ್ಲ. ಇ ಖಾತೆಯಲ್ಲಿ ದೊಡ್ಡ ಮಟ್ಟದ ಭ್ರಷ್ಟಾಚಾರ ನಡೆಯುತ್ತಿದೆ ಎಂದರು.

ಇದು ಬೆಂಗಳೂರಿಗೆ ಮಾತ್ರ ಸೀಮಿತವಾಗಿಲ್ಲ. ಕನಕಪುರದಲ್ಲಿ ಇ ಖಾತೆಗೆ 1 ಲಕ್ಷ ಪೀಕಲಾಗುತ್ತಿದೆ. ದೇವನಹಳ್ಳಿಯಲ್ಲಿ ಇ ಖಾತೆಗೆ 50 ಸಾವಿರ ಲಂಚ ನಿಗದಿಯಾಗಿದೆ. ಎಲ್ಲ ಕಡೆ ಲಂಚ ಇದೆ ಬೆಂಗಳೂರಿನ ಹರೇಹಳ್ಳಿಯಲ್ಲಿ ನಿವೃತ್ತ ಎ ಆರ್ ಓ ನಂಜುಂಡಪ್ಪ ಅವರು ಕಚೇರಿಯನ್ನೇ ತೆರೆದು ಇ ಖಾತಾ ಮಾಡಿಸಿಕೊಡಲು 30 ರಿಂದ 40 ಸಾವಿರ ರೂ. ಲಂಚ ಪಡೆಯುತ್ತಿದ್ದಾರೆ. ಇವರು ಯಾರ್ಯಾರಿಗೆ ಎಷ್ಟು ಹಣ ಕೊಡಬೇಕು ಎಂದು ಹೇಳಿರುವ ಆಡಿಯೋ ದಾಖಲೆಗಳು ಪೆನ್ ಡ್ರೈವನ್‌ಲ್ಲಿದೆ ಎಂದು ಆರ್. ಅಶೋಕ್ ಪೆನ್ ಡ್ರೈವ್‌ನ್ನು ಸದನದಲ್ಲಿ ಪ್ರದರ್ಶಿಸಿ, ಇ ಖಾತಾ ಲಂಚಾವತಾರಕ್ಕೆ ಕೊನೆ ಹಾಡಿ ಜನರಿಗೆ ತೊಂದರೆ ಕೊಡಬೇಡಿ ಎಂದು ಸರ್ಕಾರಕ್ಕೆ ಒತ್ತಾಯಿಸಿದರು.

ಇ ಖಾತಾ ಹೆಸರಿನಲ್ಲಿ ದೊಡ್ಡ ಮಾಫಿಯಾ ಗ್ಯಾಂಗ್ ಕೆಲಸ ಮಾಡುತ್ತಿದೆ. ಮೂಲ ದಾಖಲೆಗಳಲ್ಲಿ ಎ ಖಾತೆ ಇದ್ದರೂ ಅಧಿಕಾರಿಗಳು ಬಿ ಖಾತೆ ಎಂದು ನಮೂದಿಸಿ ಕಂಪ್ಯೂಟರ್ ಸಿಸ್ಟಮ್‌ನಲ್ಲಿ ಈ ರೀತಿ ಬಂದಿದೆ ಎಂದು ಜನರಿಂದ ಲಂಚ ಪಡೆದು ಇ ಖಾತೆ ಮಾಡಿಕೊಡುತ್ತಿದ್ದಾರೆ. ಇದಕ್ಕೆಲ್ಲಾ ಕೊನೆ ಹಾಡಲೇಬೇಕು ಎಂದು ಆರ್. ಅಶೋಕ್ ಹೇಳಿದರು. 2ನೇಪುಟಕ್ಕೆ

## ಸಿರವಾರ ಪಟ್ಟಣದ ವಿವಿಧ ವಾರ್ಡ್‌ಗಳಲ್ಲಿ ನೀರು ಸರಬರಾಜು ಮತ್ತು ಸ್ವಚ್ಛತೆ ಪರಿಶೀಲಿಸಿದ ಮುಖ್ಯಾಧಿಕಾರಿ ಸುರೇಶ ಶೆಟ್ಟಿ



ಧೈರ್ಯದ ದಾರಿ

**ಸಿರವಾರ :** ಪಟ್ಟಣದ ಜನತೆಗೆ ಸಮರ್ಪಕವಾಗಿ ಕುಡಿಯುವ ನೀರು ಪೂರೈಕೆ ಮತ್ತು ಸ್ವಚ್ಛತೆಯನ್ನು ಖಚಿತಪಡಿಸಿಕೊಳ್ಳಲು, ಇಂದು ಬೆಳಿಗ್ಗೆ ಸಿರವಾರ ಪಟ್ಟಣ ಪಂಚಾಯತ್‌ನ ಮುಖ್ಯ ಅಧಿಕಾರಿಗಳಾದ ಶ್ರೀ ಸುರೇಶ ಶೆಟ್ಟಿ ಅವರು ವಿವಿಧ ವಾರ್ಡ್‌ಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ವರದಿಯ ಮುಖ್ಯಾಂಶಗಳು:

**ಸ್ಥಳಕ್ಕೆ ಭೇಟಿ:** ಪಟ್ಟಣದ ಪ್ರಮುಖ ವಾರ್ಡ್‌ಗಳಿಗೆ ಭೇಟಿ ನೀಡಿದ ಮುಖ್ಯಾಧಿಕಾರಿಗಳು, ಪೈಪ್‌ಲೈನ್ ವ್ಯವಸ್ಥೆ ಮತ್ತು ನೀರಿನ ಟ್ಯಾಂಕ್‌ಗಳ ಸ್ಥಿತಿಗತಿಯನ್ನು ಪರಿಶೀಲಿಸಿದರು.

**ಸ್ವಚ್ಛತೆಗೆ ಆದ್ಯತೆ:** ವಾರ್ಡ್‌ಗಳಲ್ಲಿ ಕಸದ ವಿಲೇವಾರಿ ಮತ್ತು ಚರಂಡಿ ಸ್ವಚ್ಛತೆಯ ಬಗ್ಗೆ ಸಾರ್ವಜನಿಕರಿಂದ ಮಾಹಿತಿ ಪಡೆದರು. ಸ್ವಚ್ಛತೆಯಲ್ಲಿ ಯಾವುದೇ ಲೋಪವಾಗದಂತೆ ನೋಡಿಕೊಳ್ಳಲು ಸಿಬ್ಬಂದಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸಮರ್ಪಕ ನೀರು ಸರಬರಾಜು: ಬೇಸಿಗೆಯ ಹಿನ್ನೆಲೆಯಲ್ಲಿ ಸಾರ್ವಜನಿಕರಿಗೆ ನೀರಿನ ಸಮಸ್ಯೆ ಉಂಟಾಗದಂತೆ ನಿಗದಿತ ವೇಳಾಪಟ್ಟಿಯಂತೆ ನೀರು ಪೂರೈಸಲು ಸಿಬ್ಬಂದಿಗೆ ಆದೇಶಿಸಿದರು.

**ಉಪಸ್ಥಿತಿ:** ಈ ಸಂದರ್ಭದಲ್ಲಿ ಆಯಾ ವಾರ್ಡ್‌ಗಳ ಗೌರವಾನ್ವಿತ ಸದಸ್ಯರು, ಪಟ್ಟಣ ಪಂಚಾಯತ್‌ನ ನೀರು ಸರಬರಾಜು ವಿಭಾಗದ ಸಿಬ್ಬಂದಿ ಹಾಗೂ ಇತರೆ ನೌಕರರು ಹಾಜರಿದ್ದರು.

ಮುಖ್ಯ ಅಧಿಕಾರಿಗಳ ಮಾತು:

"ಸಾರ್ವಜನಿಕರಿಗೆ ತೊಂದರೆಯಾಗದಂತೆ ಕುಡಿಯುವ ನೀರು ಮತ್ತು ಸ್ವಚ್ಛತಾ ಕಾರ್ಯಗಳನ್ನು ನಿರ್ವಹಿಸುವುದು ನಮ್ಮ ಜವಾಬ್ದಾರಿಯಾಗಿದೆ. ಜನಪ್ರತಿನಿಧಿಗಳ ಸಹಕಾರದೊಂದಿಗೆ ಪಟ್ಟಣದ ಅಭಿವೃದ್ಧಿಗೆ ಶ್ರಮಿಸಲಾಗುವುದು."

ಸುರೇಶ ಶೆಟ್ಟಿ, ಮುಖ್ಯ ಅಧಿಕಾರಿಗಳು, ಸಿರ್ವಾರ್ ಪಟ್ಟಣ ಪಂಚಾಯತ್.

## ವಿದ್ಯಾರ್ಥಿಗಳು ಜೀವನದಲ್ಲಿ ಉನ್ನತ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು: ಶ್ರೀಗುರು ಶಂಭುಲಿಂಗ ಮಹಾಸ್ವಾಮಿಗಳು



ಧೈರ್ಯದ ದಾರಿ

**ಮಾನ್ವಿ :** ತಾಲೂಕಿನ ಕುರುಡಿ ಗ್ರಾಮದ ವಿದ್ಯಾನಿಧಿ ಶಾಲಾ ಆವರಣದಲ್ಲಿ ನಡೆದ ವಿದ್ಯಾನಿಧಿ ಸಂಭ್ರಮ ಕಾರ್ಯಕ್ರಮವನ್ನು ಸರಸ್ವತಿ ಹಾಗೂ ಒಳಬಳ್ಳಾರಿ ಶ್ರೀ ಚನ್ನಬಸವ ಶಿವಯೋಗಿಗಳು ಹಾಗೂ ಪ್ರೇರಣಾ ಶಕ್ತಿ ದಿ. ಸ್ವಾಮಿ ಚನ್ನಬಸಯ್ಯನವರ ಭಾವಚಿತ್ರಗಳಿಗೆ ಪುಷ್ಪ ಸಮರ್ಪಿಸುವ ಮೂಲಕ ಕಲ್ಲೂರಿನ ಶ್ರೀ ಗುರು ಅಡವೀಶ್ವರ ಶಿವಯೋಗಿಗಳ ಮಠದ ಶ್ರೀಗುರು ಶಂಭುಲಿಂಗ ಮಹಾಸ್ವಾಮಿಗಳು ಉದ್ಘಾಟಿಸಿ ಮಾತನಾಡಿ ವಿದ್ಯಾರ್ಥಿಗಳು ಸಂಸ್ಕರ, ಶಿಸ್ತು, ಪರಿಶ್ರಮ ಹಾಗೂ ಉನ್ನತ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಜೀವನದಲ್ಲಿ ಯಶಸ್ಸನ್ನು ಪಡೆಯುವುದಕ್ಕೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

2025–26ನೇ ಸಾಲಿನಲ್ಲಿ ವಿವಿಧ ವಸತಿ ಶಾಲೆಗಳಿಗೆ ತಾಲೂಕಿನಿಂದ ಆಯ್ಕೆಯಾದ ವಿದ್ಯಾರ್ಥಿಗಳನ್ನು ಹಾಗೂ ಪ್ರಸ್ತುತ ವೈದ್ಯ ಪದವಿಯನ್ನು ಅಭ್ಯಾಸಿಸುತ್ತಿರುವ ಶಾಲೆಯ ಹಳೆ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು.

ವಿದ್ಯಾರ್ಥಿಗಳಿಂದ ಸಂಗೀತ, ನೃತ್ಯ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಗೌರವಾಧ್ಯಕ್ಷೆ ಜಯದೇವಿ ಕುರುಡಿ, ಸಿಆರ್‌ಪಿ. ವೆಂಕಟೇಶ,ತಾಲೂಕು ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ಅಧ್ಯಕ್ಷರಾದ ರಾಜ ಸುಭಾಷ್ ಚಂದ್ರ ನಾಯಕ್, ಕಾರ್ಯದರ್ಶಿ ರಾಜು ತಾಳಿಕೋಟಿ, ಉಪಾಧ್ಯಕ್ಷ ಮುಖಿಮ್ ಎಚ್. ಶರ್ಫುದ್ದಿನ್ ಪೋತ್ನಾಳ್, ಶಿಕ್ಷಣಪ್ರೇಮಿ ಪ್ರಭಾಕರ್ ಶೆಟ್ಟಿ, ವಿದ್ಯಾನಿಧಿ ಪದವಿಪೂರ್ವ ಕಾಲೇಜು ರಾಯಚೂರು ಪ್ರಾಂಶುಪಾಲರಾದ ಡಾ. ಚಂದ್ರಗಿರಿಶ್ , ರವಿಕುಮಾರ ಗೌಡ ಚಿಮ್ಲಾಪುರ, ಸುಬಾನ್ ಬೇಗ್, ಭೀಮರಾಯ ಸೀತಿಮನಿ, ಆಂಜನೇಯ, ಪ್ರಭು ಟಕ್ಕಳಿಕಿ, ಶರಣಬಸವ, ಆಂಜನೇಯ ರಾಜೋಳ್ಳಿ ಸೇರಿದಂತೆ ಇನ್ನಿತರರು ಇದ್ದರು.

## ನೂತನ ಮಾತಾಶ್ರೀ ಜಗದಾಂಭ ಮರಿಯಮ್ಮ ದೇವಿ ಹಾಗೂ ಸಂತ ಶ್ರೀ ಸೇವಾಲಾಲ್ ಮಹಾರಾಜರ ಮೂರ್ತಿ ಪ್ರತಿಷ್ಠಾಪನೆ



ಧೈರ್ಯದ ದಾರಿ

**ಮಾನ್ವಿ:** ತಾಲೂಕಿನ ಮುರಹರಪುರ ತಾಂಡದಲ್ಲಿ ನೂತನ ಮಾತಾಶ್ರೀ ಜಗದಾಂಭ ಮರಿಯಮ್ಮ ದೇವಿ ಹಾಗೂ ಸಂತ ಶ್ರೀ ಸೇವಾಲಾಲ್ ಮಹಾರಾಜರ ದೇವಸ್ಥಾನ ಹಾಗೂ ಮೂರ್ತಿ ಪ್ರತಿಷ್ಠಾಪನೆ ಅಂಗವಾಗಿ ಕಲಬುರ್ಗಿ ಗಬ್ಬೂರುವಾಡಿ ಶ್ರೀ ಬಳಿರಾಮ್ ಮಹಾರಾಜರ ನೇತೃತ್ವದಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆದವು ಬೆಳಿಗ್ಗೆ ಕಲ್ಮಠ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ನೂತನ ದೇವಸ್ಥಾನವನ್ನು ಉದ್ಘಾಟಿಸಿ ನೂತನ ಮಾತಾಶ್ರೀ ಜಗದಾಂಭ ಮರಿಯಮ್ಮ ದೇವಿ ಹಾಗೂ ಸಂತ ಸೇವಾಲಾಲ್ ಮಹಾರಾಜರ ಮೂರ್ತಿಗಳಿಗೆ ಪ್ರಾಣ ಪ್ರತಿಷ್ಠಪನೆ ನೆರವೇರಿಸಿ ವಾಸ್ತುಹೋಮ ಸೇರಿದಂತೆ ವಿವಿಧ ಹೋಮಗಳಿಗೆ ಪೂರ್ಣಹುತಿ ಸಮರ್ಪಿಸಿ ಆರ್ಶಿವಾಚನ ನೀಡಿ ಗ್ರಾಮದಲ್ಲಿನ ಪ್ರತಿಯೊಬ್ಬರು ಕೂಡ ನಿತ್ಯ ಮಾತಾ ಜಗದಾಂಭ ಮರಿಯಮ್ಮ ದೇವಿ ಹಾಗೂ ಸಂತ ಸೇವಾಲಾಲ್ ಮಹಾರಾಜರಿಗೆ ಭಕ್ತಿಯಿಂದ ಪೂಜೆಯನ್ನು ಸಲ್ಲಿಸುವುದರಿಂದ ತಮ್ಮ ಇಷ್ಟಾರ್ಥಗಳು ನೆರವೇರುತ್ತವೆ ದುಷ್ಚಟಗಳನ್ನು ಬಿಟ್ಟು ಪೂಜ್ಯ ಸಂತ ಸೇವಲಾಲರು ತೋರಿದ ಅದರ್ಶವಾದ ಸನ್ಮಾರ್ಗದಲ್ಲಿ ನಡೆದು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣವನ್ನು ನೀಡುವ ಮೂಲಕ ಅವರ ಭವಿಷ್ಯವನ್ನು ರೂಪಿಸುವಂತೆ ತಿಳಿಸಿದರು.

ಗದಗಿನ ಸಾವಿತ್ರಿ ಬಾಯಿ ತಂಡದವರಿಂದ ಬಂಜಾರ ಜಾನಪದ ಗಾಯನ ನಡೆಯಿತು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕರಾದ ತಿಪ್ಪರಾಜ್ ಹವಾಲ್ದಾರ್, ರಾಜ್ಯ ಜೆಡಿಎಸ್ ಯುವ ಘಟಕದ ಉಪಾಧ್ಯಕ್ಷರಾದ ರಾಜಾ

## ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್ ವತಿಯಿಂದ ಎಸ್‌ಎಸ್‌ಎಲ್‌ಸಿ ಮಕ್ಕಳಿಗೆ ವಿಶೇಷ ತರಗತಿಯ ಸಮಾರೋಪ ಸಮಾರಂಭ



ಧೈರ್ಯದ ದಾರಿ

**ಮಾನ್ವಿ:** ಎಸ್‌ಎಸ್‌ಎಲ್ಸಿ ಫಲಿತಾಂಶ ಸುಧಾರಣೆಗಾಗಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್ ವತಿಯಿಂದ ಬಾಲಕರ ಸರಕಾರಿ ಪ್ರೌಢಶಾಲೆ ಶಾಲೆಯ 10ನೇ ತರಗತಿ ವಿದ್ಯಾರ್ಥಿಗಳಿಗೆ ಮೂರು ತಿಂಗಳುಗಳ ಉಚಿತ ವಿಶೇಷ ತರಗತಿಯ ಸಮಾರೋಪ ಸಮಾರಂಭವನ್ನು ಶಾಲೆಯ ಉಪಾಪ್ರಾಂಶುಪಾಲ ಮಹಿಬೂಬ್ ಪಾಷಾ ಅವರು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿದರು.

ನಂತರ ಮಾತನಾಡಿದ ಅವರು, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಬಿ.ಸಿ. ಟ್ರಸ್ಟ್ ನ ಸಂಸ್ಥಾಪಕರು ಹಾಗೂ ಶ್ರೀ ಕ್ಷೇತ್ರದ ಧರ್ಮಧಿಕಾರಿಯಾದ ವೀರೇಂದ್ರ ಹೆಗ್ಗಡೆ ಅವರ ಸಮಾಜಮುಖಿ ಕಾರ್ಯಗಳಲ್ಲಿ ಶೈಕ್ಷಣಿಕ ಕಾರ್ಯ ಕೂಡ ಒಂದಾಗಿದ್ದು, ಶೈಕ್ಷಣಿಕ ಕಾಳಜಿಯಿಂದಾಗಿ ನಮ್ಮ ಶಾಲೆಯ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಫಲಿತಾಂಶ ಸುಧಾರಣೆಗಾಗಿ ನಮ್ಮ ಶಾಲೆಯನ್ನು ಆಯ್ಕೆ ಮಾಡಿಕೊಂಡು ಸತತವಾಗಿ ಮೂರು ತಿಂಗಳುಗಳ ಕಾಲ ಅತಿಥಿ ಶಿಕ್ಷಕನನ್ನು ನೇಮಿಸುವ ಮೂಲಕ ವಿಶೇಷ ತರಗತಿಗಳನ್ನು ನಡೆಸಿದ್ದಾರೆ ಇದರಿಂದ ಮಕ್ಕಳು ಪರೀಕ್ಷೆಯಲ್ಲಿ ಹೆಚ್ಚಿನ ಅಂಕಗಳನ್ನು ಗಳಿಸಲು ತುಂಬಾ ಉಪಯುಕ್ತವಾಗಿದ್ದು, ಈ ಬಾರಿ ನಮ್ಮ ಶಾಲೆಯ ಮಕ್ಕಳು ಉತ್ತಮ ಫಲಿತಾಂಶ ಸಾಧಿಸಲಿದ್ದಾರೆ. ಮಕ್ಕಳು ಇದರ ಸಂಪೂರ್ಣ ಸದುಪಯೋಗವನ್ನು ಪಡೆದುಕೊಂಡಿದ್ದಾರೆ. ಆದ್ದರಿಂದ ಧರ್ಮಸ್ಥಳ ಸಂಸ್ಥೆಗೆ ಹಾಗೂ ಧರ್ಮಧಿಕಾರಿಯಾದ ವೀರೇಂದ್ರ ಹೆಗ್ಗಡೆ ಮತ್ತು ಮಾತಾ ಹೇಮಾವತಿ ಹೆಗ್ಗಡೆ ಅವರಿಗೆ ಶಾಲೆ ಪರವಾಗಿ ಧನ್ಯವಾದಗಳನ್ನು ತಿಳಿಸಿದರು.

ನಂತರ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಬಿ.ಸಿ.ಟ್ರಸ್ಟ್ ನ ವಲಯ ಮೇಲ್ವಿಚಾರಕ ಮೈಲಾರಿ ಅವರು ಮಾತನಾಡಿ, ಶ್ರೀಕ್ಷೇತ್ರ ಧರ್ಮಸ್ಥಳ ಸಂಸ್ಥೆಯು ಪೂಜ್ಯ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆ, ಮಾತಾ ಹೇಮಾವತಿ ಹೆಗ್ಗಡೆ ಅವರ ಮಾರ್ಗದರ್ಶನದಲ್ಲಿ ನಾಡಿನದ್ಯಂತ ಶೈಕ್ಷಣಿಕ, ಸಾಮಾಜಿಕ, ಆರ್ಥಿಕ, ಮಹಿಳಾ ಸ್ವಾವಲಂಬಿ ಸೇರಿದಂತೆ ದೇವಸ್ಥಾನಗಳ ಜೀರ್ಣೋದ್ದಾರ, ಕೆರೆ ನಿರ್ಮಾಣ ದಂತ ಹತ್ತು ಹಲವು ಸಾಮಾಜಿಕ ಕಾರ್ಯಗಳನ್ನು ಮಾಡುತ್ತಿದ್ದು, ಈ ಭಾಗದ ಶೈಕ್ಷಣಿಕ ಪ್ರಗತಿಗಾಗಿ ಹಾಗೂ ಮಕ್ಕಳ ಉತ್ತಮ ಭವಿಷ್ಯಕ್ಕಾಗಿ ರಾಯಚೂರು ಜಿಲ್ಲೆಯಲ್ಲಿ ಸರಕಾರಿ ಶಾಲೆಗಳನ್ನು ಆಯ್ಕೆ ಮಾಡಿಕೊಂಡು ಪ್ರತಿ ಶಾಲೆಗೆ ಹತ್ತು ರೂ. ವೆಚ್ಚ 2ನೇಪುಟಕ್ಕೆ

ಮೊದಲನೇ ಪುಟದಿಂದ

# ಇ_ಖಾತಾ ವಿತರಣೆಯಲ್ಲಿ ಭ್ರಷ್ಟಾಚಾರ ದಾಖಲೆ ಪ್ರದರ್ಶಿಸಿದ ಅಶೋಕ್

ಬೆಂಗಳೂರಿನಲ್ಲಿ ತೆರಿಗೆ ಭಯೋತ್ಪಾದನೆ ಇದೆ. ದೊಡ್ಡ ಬಿಲ್ಡರ್‌ಗಳಿಗೆ ತೆರಿಗೆ ವಸೂಲಿ ಆಗುತ್ತಿದೆ. ಎಚ್‌ಎಂಟಿ ಸಂಸ್ಥೆಯಿಂದಲೇ ಸಾವಿರಾರು ಕೋಟಿ ರೂ. ಆಸ್ತಿ ತೆರಿಗೆ ಬಾಕಿ ಇದೆ. ಇಂತಹವರ ತಂಟೆಗೆ ಬಿಬಿಎಂ ಹೋಗುವುದಿಲ್ಲ. ಬಡವರ ಮೇಲೆ ಪ್ರಹಾರ ಮಾಡುತ್ತಾರೆ. ಸಮರ್ಪಕವಾಗಿ ತೆರಿಗೆ ಕಟ್ಟುತ್ತಿರುವವರಿಗೆ ಮನೆ ಹರಾಜು ಎಂಬ ನೋಟಿಸ್ ನೀಡಲಾಗಿದೆ. ಈ ರೀತಿ ನೂರಾರು ಜನರಿಗೆ ನೋಟಿಸ್ ನೀಡಿರುವ ದಾಖಲೆಗಳು ತಮ್ಮ ಬಳಿ ಇವೆ ಎಂದು ಹೇಳಿದರು.

ಸರಿಯಾಗಿ ಆಸ್ತಿ ತೆರಿಗೆ ಕಟ್ಟುತ್ತಿರುವವರಿಗೆ ನೋಟಿಸ್ ನೀಡುತ್ತಿದ್ದಾರೆ. ಇದು ನಿಮ್ಮ ಅಧಿಕಾರಿಗಳ ಕಾರ್ಯವೈಖರಿ ಎಂದು ಹೇಳಿದರು.

ಬೆಂಗಳೂರಿನಲ್ಲಿ ಗುಂಡಿಗಳಿಲ್ಲದ ರಸ್ತೆಯೇ ಇಲ್ಲ. ಗುಂಡಿ ಮುಚ್ಚಲು ಸಾವಿರಾರು ಕೋಟಿ ರೂ. ಖರ್ಚು ಮಾಡಿದ್ದೀರಾ. ಆ ಹಣ .ಯಾರ ಜೇಬಿಗೆ ಹೋಯ್ತು. ಗುಂಡಿಗಳಿಂದ ರಸ್ತೆಗಳಿಗೆ ಮುಕ್ತಿ ಸಿಕ್ಕಿಲ್ಲ. ಅಮಾಯಕ ಜನ ಗುಂಡಿಗಳಿಂದ ಅಪಘಾತವಾಗಿ ಪ್ರಾಣ ಕಳೆದುಕೊಳ್ಳುತ್ತಿದ್ದಾರೆ. ಇದಕ್ಕೆ ಯಾರು ಹೊಣೆ ಎಂದು ಪ್ರಶ್ನಿಸಿದರು.

ಬೆಂಗಳೂರು ಇಡೀ ರಾಜ್ಯಕ್ಕೆ ಶೇ. 65 ರಷ್ಟು ಆದಾಯ ಕೊಡುವ ನಗರ. ರಾಜ್ಯದ ಮುಖ್ಯ ಇಂಜಿನ್ ಇದ್ದ ಹಾಗೆ. ಇಲ್ಲಿಯೇ ಮೂಲ ಸೌಕರ್ಯಗಳು ಇಲ್ಲ ಎಂದರೇ ಹೇಗೆ. ಬಹಳಷ್ಟು ಕಂಪನಿಗಳು ಬೆಂಗಳೂರು ಬಿಟ್ಟು ಹೋಗುವ ಆತಂಕ ಎದುರಾಗಿದೆ. ಪಕ್ಕದ ರಾಜ್ಯದ ಮುಖ್ಯಮಂತ್ರಿ ರೇವಂತ್ ರೆಡ್ಡಿ, ಹೈದರಾಬಾದ್‌ನ ಬೆಂಗಳೂರಿಗೆ ಹೋಲಿಸಬೇಡಿ. ಬೆಂಗಳೂರು ಓಪ್ಲೇಸ್ ಎಂದೆಲ್ಲಾ ಮಾತನಾಡಿದ್ದಾರೆ. ಉಪಮುಖ್ಯಮಂತ್ರಿಗಳು ಅವರಿಗೆ ಒಂದು ಪ್ರತಿಕ್ರಿಯೆ ನೀಡಿಲ್ಲ ಹೀಗಾದರೆ ಹೇಗೆ ಎಂದು ಪ್ರಶ್ನಿಸಿದರು.

ಬೆಂಗಳೂರಿನಲ್ಲಿ ಕಸ ವಿಲೇವಾರಿಯೂ ಸರಿಯಾಗಿ ನಡೆದಿಲ್ಲ. ಸರ್ಕಾರ ಬಂದಾಗ ಉಪಮುಖ್ಯಮಂತ್ರಿಗಳು ಬೆಂಗಳೂರಿನ ನಾಲ್ಕು ಕಡೆ ನೂರು ಎಕರೆ ಡಂಪ್ಪಿಂಗ್ ಯಾರ್ಡ್‌ಗೆ ಜಾಗ ನೀಡುತ್ತೇವೆ ಎಂದೆಲ್ಲಾ ಹೇಳಿದ್ದರು ಮೂರೂ ವರ್ಷವಾದರೂ ಕಸ ವಿಲೇವಾರಿ ಕೆಲಸ ಸಮರ್ಪಕವಾಗಿ ಆಗಿಲ್ಲ. ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳು ಪಾದಯಾತ್ರೆ, ನಗರ ಪ್ರದರ್ಶನ ಮಾಡಿದರೂ ಬೆಂಗಳೂರಿನ ಸಮಸ್ಯೆಗಳು ಹಾಗಯೇ ಉಳಿದಿವೆ ಎಂದರು

ಬೆಂಗಳೂರಿನ ಹಲವೆಡೆ ಕಸದ ರಾಶಿಯೇ ಇದೆ. ಕಸ ಸಮಸ್ಯೆಗೆ ಸರ್ಕಾರ ಮುಕ್ತಿ ಕೊಡಬೇಕು ಎಂದರು.

ಬೇಸಿಗೆ ಕಾಲಿಟ್ಟಿದೆ. ಕುಡಿಯುವ ನೀರಿಗೆ ಹಾಹಾಕಾರ ಬರಬಹುದು ಅದಕ್ಕೆ ಏನು ಸಿದ್ಧತೆ ಮಾಡಿಕೊಂಡಿದ್ದಾರೆ ಎಂಬುದನ್ನು ಹೇಳಿಲ್ಲ ಎಂದರು

ಬೆಂಗಳೂರಿನಲ್ಲಿ ಓಸಿಸಿಸಿ ಸಮಸ್ಯೆ ದೊಡ್ಡದಾಗಿದೆ. ನಾಲ್ಕು ಲಕ್ಷ ಜನ ಮನೆ ಕಟ್ಟಿಸಿಕೊಂಡು ಓಸಿಸಿಸಿ ಇಲ್ಲದೆ ಸಂಕಷ್ಟಕ್ಕೆ ಸಿಲುಕಿದ್ದಾರೆ. ಸುಪ್ರೀಂಕೋರ್ಟ್ ಆದೇಶವನ್ನು ರಾಜ್ಯದಲ್ಲಿ ಮಾತ್ರ ಜಾರಿ ಮಾಡಲಾಗಿದೆ. ಮನೆ ಕಟ್ಟಿದ ಮೇಲೆ ಓಸಿಸಿಸಿ ಕೊಡಲ್ಲ ಎಂದರೆ ಹೇಗೆ. ಮನೆ ಕಟ್ಟಲು ಅವಕಾಶ ನೀಡಿದ ಇಂಜಿನಿಯರ್, ಕಮಿಷನರ್ ಮೇಲೆ ಕ್ರಮ ಆಗಬೇಕು. ವಾಣಿಜ್ಯ ಕಟ್ಟಡಗಳನ್ನು ಬಿಟ್ಟು ಮನೆ ನಿರ್ಮಿಸಿಕೊಂಡಿರುವವರಿಗೆ ಓಸಿಸಿಸಿ ನೀಡಬೇಕು ಎಂದು ಒತ್ತಾಯಿಸಿದರು.

ಬೆಂಗಳೂರಿನಲ್ಲಿ ಅಭಿವೃದ್ಧಿ ಕಾರ್ಯಗಳೇ ನಡೆಯುತ್ತಿಲ್ಲ. ಹಲವು ವರ್ಷಗಳಿಂದ ಕೈಗೆತ್ತಿಕೊಂಡಿದ್ದ ಜಿಜಿ ಪುರ ಸೇತುವೆ ಪೂರ್ಣಗೊಂಡಿಲ್ಲ. ರಾಜರಾಜೇಶ್ವರಿ ಜಂಕ್ಷನ್ ಕಾಮಗಾರಿಗಳು ಪೂರ್ಣಗೊಂಡಿಲ್ಲ. ಉಳ್ಳಾಳು ಗ್ರೇಟ್ ಸಪರಟೇರ್ ಪೂರ್ಣಗೊಂಡಿಲ್ಲ. ಬೆಂಗಳೂರಿನಲ್ಲಿ ಅಭಿವೃದ್ಧಿ ಕಾರ್ಯಗಳೇ ನಡೆಯುತ್ತಿಲ್ಲ. ಕೇಳಿದರೆ ಯಾವುದಕ್ಕೂ ದುಡ್ಡಿನ ಕೊರತೆ ಇಲ್ಲ ಎಂದು ಹೇಳುತ್ತಾರೆ. ದುಡ್ಡಿನ ಕೊರತೆ ಇಲ್ಲದಿದ್ದರೆ ಈ ಕಾಮಗಾರಿಗಳನ್ನು ಏಕೆ ಪೂರ್ಣಗೊಳಿಸಿಲ್ಲ. ಬೆಂಗಳೂರಿನ ವೇಗಕ್ಕೆ ಏಕೆ ಬ್ರಾಂಡ್ ಬೆಂಗಳೂರು ಎಂದೆಲ್ಲಾ ಮಾತನಾಡುತ್ತೀರಿ ಯಾವ ಬ್ಯಾಂಡು ಆಗಿಲ್ಲ. ಬೆಂಗಳೂರು ಅಭಿವೃದ್ಧಿಯೂ ಆಗಿಲ್ಲ ಎಂದು ಆರ್. ಅಶೋಕ್ ಆಕ್ರೋಶದಿಂದ ಹೇಳಿದರು.

## ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್ ವತಿಯಿಂದ ಎಸ್‌ಎಸ್‌ಎಲ್‌ಸಿ ಮಕ್ಕಳಿಗೆ ವಿಶೇಷ ತರಗತಿಯ ಸಮಾರೋಪ ಸಮಾರಂಭ

ಮಾಡಿ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಂಡು ಅವರ ಮೂಲಕ ಕಠಿಣ ವಿಷಯಗಳಾದ ಇಂಗ್ಲೀಷ, ಗಣಿತ, ವಿಜ್ಞಾನ ವಿಷಯಗಳ ಬಗ್ಗೆ ಎಸ್‌ಎಸ್‌ಎಲ್‌ಸಿ ಮಕ್ಕಳಿಗೆ ಉಚಿತವಾಗಿ ವಿಶೇಷ ತರಗತಿಗಳನ್ನು ಮೂರು ತಿಂಗಳುಗಳ ಕಾಲ ನಡೆಸಲಾಗಿದೆ ಇದರಿಂದ ಅನೇಕ ವಿದ್ಯಾರ್ಥಿಗಳಿಗೆ ಉಪಯುಕ್ತವಾಗಿದೆ ಎಂದರು.

ನಂತರ ಧರ್ಮಸ್ಥಳ ಸಂಸ್ಥೆ ವತಿಯಿಂದ ಮಕ್ಕಳಿಗೆ ಪರೀಕ್ಷೆ ಬರೆಲು ಪೆನ್ನು ಗಳನ್ನು ವಿತರಿಸಲಾಯಿತು. ನಂತರ ವಿದ್ಯಾರ್ಥಿಗಳು ಮಾತನಾಡಿ ತಮ್ಮ ಅಭಿಪ್ರಾಯಗಳ ಮೂಲಕ ವಿಶೇಷ ತರಗತಿಯ ಉಪಯುಕ್ತತೆಯನ್ನು ಹೇಳಿದರು.

ಈ ಸಂದರ್ಭದಲ್ಲಿ ಶಾಲೆಯ ಉಪಾಪ್ರಾಂಶುಪಾಲ ಮಹಿಬೂಬ್ ಪಾಷ, ಧರ್ಮಸ್ಥಳ ಸಂಸ್ಥೆಯ ವಲಯ ಮೇಲ್ವಿಚಾರಕ ಮೈಲಾರಿ, ಸೇವಾ ಪ್ರತಿನಿಧಿ ಕವಿತಾ ಹಾಗೂ ಸಹಶಿಕ್ಷಕಿ ಲತಾ ತಾಸಿನ, ಅ.ಶಿ ಗೋವಿಂದರಾಜು ಮಕ್ಕಳು ಉಪಸ್ಥಿತರಿದ್ದರು.

## ನೂತನ ಮಾತಾಶ್ರೀ ಜಗದಾಂಭ ಮರಿಯಮ್ಮ ದೇವಿ ಹಾಗೂ ಸಂತ ಶ್ರೀ ಸೇವಾಲಾಲ್ ಮಹಾರಾಜರ ಮುರ್ತಿ ಪ್ರತಿಷ್ಠಾಪನೆ

ರಾಮಚಂದ್ರ ನಾಯಕ,ಮುಖಂಡರಾದ ರಾಜಾಶ್ಯಾಮಸುಂದರನಾಯಕ, ರಾಜ್ಯ ರೈತ ಸಂಘದ ಗೌರವಾಧ್ಯಕ್ಷರಾದ ಚಾಮರಸಮಾಲಿ ಪಾಟೀಲ್, ರಾಜಾ ರಾಮಚಂದ್ರ ನಾಯಕ,

ರಾಜ್ಯ ಬಂಜಾರ ಸೇವಾ ಸಂಘದ ಉಪಾಧ್ಯಕ್ಷರಾದ ಗೋವಿಂದರಾಜ ವಕೀಲರು, ರಾಜ್ಯ ಸಂಚಾಲಕರಾದ ಮೌನೇಶ ವಕೀಲರು,ತಾ.ಅಧ್ಯಕ್ಷರಾದ ಗೋವಿಂದ ಗುತ್ತೇದಾರರು.ತಾ.ಗೌ.ಅಧ್ಯಕ್ಷರಾದ ಯಂಕಪ್ಪ ಕಾರಬಾರಿ, ವೆಂಕಪ್ಪ ಪವರ್ಮ ಬೊಮ್ಮನಾಳ್ ಶಿವನಗೌಡ, ಗುಮ್ಮ ಬಸವರಾಜ ವಕೀಲರು, ಚನ್ನಪ್ಪಗೌಡ, ಕರಿಯಪ್ಪ, ಮುಸ್ತಾಫ ಸಾಹುಕಾರ್ ಕಪಗಲ್, ಕರಿಯಪ್ಪ, ಗೋನಾಪ್ಪ ಪೂಜಾರಿ, ಅಯ್ಯನಗೌಡ ದದ್ದಲ್, ಶ್ರೀನಿವಾಸ ಸಾಹುಕರ್ ಸೀಕಲ್,ಮೌನೇಶ ನಾಯಕ ದದ್ದಲ್,ವಿಜಯಗೌಡ ನೀರಮಾನ್ವಿ, ಬೋಜಪ್ಪ ಪೂಜಾರಿ,ಧನರಾಜ, ಗೋವಿಂದ ಕಂಡಕ್ಟರ್,ಸತ್ಯನಾರಾಯಣ,ಮಲ್ಲಿಕಾರ್ಜುನ ಪೂಜಾರಿ,ಗೋವಿಂದಪವಾರ್, ಪೊಮ್ಮಣ್ಣ,ನಾಗಪ್ಪ ಪೂಜಾರಿ,ಮೂಕಣ್ಣ,ಉಮಕಾಂತ ಸಾಹುಕರ್,ಗಜೇಂದ್ರ,ಶಾಂತಪ್ಪ, ಅಮರೇಶಪಾಟೀಲ್,ಕಾಸಿಂನಾಯಕ,ಈಶಪ್ಪ, ವಾಸಪ್ಪ, ಗೋನಪ್ಪ ಪೂಜಾರಿ, ವೆಂಕಪ್ಪ ಪೂಜಾರಿ ಸೇರಿದಂತೆ ಇನ್ನಿತರರು ಇದ್ದರು.

# ಸಿಂಧನೂರು ನಗರಸಭೆಯಿಂದ ವೈಯಕ್ತಿಕ ಚಟುವಟಿಕೆಗಳಿಗೆ ಅರ್ಜಿ

**ರಾಯಚೂರು:** ಜಿಲ್ಲೆಯ ಸಿಂಧನೂರಿನ ನಗರಸಭೆಯಿಂದ 2026-27ನೇ ಸಾಲಿನ ಶೇ.7.25 & ಶೇ.5 ಯೋಜನೆಗಳಿಗೆ ಕಾಯ್ದಿರಿಸಲಾದ ಎಸ್.ಎಫ್.ಸಿ (ಮುಕ್ತ ನಿಧಿ) ಅನುದಾನಗಳ ಅನುಷ್ಠಾನಕ್ಕಾಗಿ ವೈಯಕ್ತಿಕ ಚಟುವಟಿಕೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಪೂರ್ಣ ವಿವರದ ಪ್ರಕಟಣೆಯನ್ನು ನಗರಸಭೆ ಕಾರ್ಯಾಲಯ ನೋಟಿಸ್ ಫಲಕದಲ್ಲಿ ಹಾಗೂ ವೆಬ್‌ಸೈಟ್ ವಿಳಾಸ: http://www.sindhanurcity.mrc.gov.in/ ನಲ್ಲಿ ಪ್ರಕಟಿಸಲಾಗಿದೆ.

ಅರ್ಹ ಫಲಾನುಭವಿಗಳು ವೈಯಕ್ತಿಕ ಚಟುವಟಿಕೆವಾರು ಮುಂದೆ ತಿಳಿಸಿರುವ ಅಗತ್ಯ ಎಲ್ಲಾ ದಾಖಲೆಗಳನ್ನು ಗೆಜೆಟೆಡ್ ಅಧಿಕಾರಿಗಳ ಧೃಢೀಕರಣದೊಂದಿಗೆ ಏಪ್ರಿಲ್ 22ರ ಸಂಜೆ 5.30ರೊಳಗೆ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಕೊನೆಯ ದಿನಾಂಕ ಮೀರಿ ಬಂದಂತಹ ಯಾವುದೇ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ವೈಯಕ್ತಿಕ ಚಟುವಟಿಕೆಗಳ ಯೋಜನೆಗಳ ಬಗ್ಗೆ ಸಮರ್ಪಕವಾಗಿ ತಿಳಿದುಕೊಂಡು ಅರ್ಜಿಗಳನ್ನು ಸಲ್ಲಿಸಬೇಕೆಂದು ಸಿಂಧನೂರು ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾರ್ಚ್ 25ರಂದು ಎನ್-ಜೆನ್ ಅಂಚೆ ಕಚೇರಿ ಉದ್ಘಾಟನೆ

**ರಾಯಚೂರು:** ಭಾರತ ಸರ್ಕಾರದ ಅಂಚೆ ಇಲಾಖೆಯ ರಾಯಚೂರು ವಿಭಾಗದಿಂದ ಎನ್-ಜೆನ್ ಅಂಚೆ ಕಚೇರಿ ಉದ್ಘಾಟನಾ ಕಾರ್ಯಕ್ರಮವನ್ನು ಮಾರ್ಚ್ 25ರ ಬೆಳಿಗ್ಗೆ 10 ಗಂಟೆಗೆ ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಜಗಜ್ಯೋತಿ ಬಸವೇಶ್ವರ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಕೋರಲಾಗಿದೆ.

ಮುಖ್ಯ ಅತಿಥಿಗಳಾಗಿ ಧಾರವಾಡದ ಎನ್.ಕೆ. ಪ್ರದೇಶ ಅಂಚೆ ಸೇವೆಗಳ ನಿರ್ದೇಶಕರಾದ ಶ್ರೀಹರ್ಷ ಎನ್,

ಧಾರವಾಡದ ಎನ್.ಕೆ. ಪ್ರದೇಶ ಸಹಾಯಕ ಪೋಸ್ಟ್ ಮಾಸ್ಟರ್ ಜನರಲ್ (ಬಿಡಿ) ಎಚ್.ಎಂ.ಮಂಜೇಶ್, ರಾಯಚೂರು ವಿಭಾಗದ ಅಂಚೆ ಅಧೀಕ್ಷಕರಾದ ಶಿವಾನಂದ ಆರ್.ಎಚ್., ಕೃಷಿ ವಿಜ್ಞಾನ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ.ಎಂ.ಹನುಮಂತಪ್ಪ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ.

# ಕೆಪಿಸಿಎಲ್ ನಿಂದ ಹುದ್ದೆ ಭರ್ತಿಯಲ್ಲಿ ಅನ್ಯಾಯ



**ಬಳ್ಳಾರಿ, ಮಾ.24:** ಕರ್ನಾಟಕ ವಿದ್ಯುತ್ ನಿಗಮ(ಕೆಪಿಸಿಎಲ್) ನಿಂದ ಖಾಲಿ ಇರುವ ಹುದ್ದೆಗಳನ್ನು ಭರ್ತಿಮಾಡುವಲ್ಲಿ ಅನ್ಯಾಯವಾಗಿದೆ ಎಂದು ಹುದ್ದೆಗೆ ಅರ್ಜಿ ಸಲ್ಲಿಸಿದ್ದ ಅಭ್ಯರ್ಥಿ ಕೀರ್ತಿ ಕಿಶೋರ ಆರೋಪಿಸಿದ್ದಾರೆ.

ಅವರು ಇಂದು ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಟಿ ನಡೆಸಿದ ಇವರು. ಕೆಪಿಸಿಎಲ್ ನಿಂದ ಖಾಲಿ ಹುದ್ದೆಗಳಿಗೆ 2017 ರಲ್ಲಿ ನೋಟಿಫಿಕೇಷನ್ ಮಾಡಿ, 2018 ಪರೀಕ್ಷೆ ನಡೆದು ಫಲಿತಾಂಶ ತಡೆಹಿಡಿದರು ಇಒ ಬಗ್ಗೆ ಎರೆಡು ಪ್ರಕರಣ ದಾಖಲಾಗಿತ್ತು. ನ್ಯಾಯಾಲಯ ಮರು ಪರೀಕ್ಷೆ ಮಾಡಲು ಸೂಚಿಸಿತ್ತು.

ಮತ್ತೆ 2023 ನಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ). ನೆಗಟಿವ್ ಮಾರ್ಕ್ ನಲ್ಲಿ ಫಲಿತಾಂಶ ಪ್ರಕಟಿಸಿತ್ತು. ಆದರೆ ನೋಟಿಫಿಕೇಷನ್ ನಲ್ಲಿ ನೆಗಟಿವ್ ಮಾರ್ಕ್ ಎಂದು ಹೇಳಿರಲಿಲ್ಲ. ಇದರ ವಿರುದ್ದ ನ್ಯಾಯಾಲಯದ ಮೊರೆ ಹೋದಾಗ ಸಿಂಗಲ್ ಮತ್ತು ಡಬಲ್ ಬೆಂಚ್ ನಲ್ಲಿ ಪರೀಕ್ಷೆ ಸರಿಯಾಗಿದೆಂದು ಹೇಳಿತು. ಇದರ ವಿರುದ್ದ ಮತ್ತೆ ಒಂಬತ್ತು ಜನ ಪ್ರಕರಣ ದಾಖಲಿಸಿದ್ದರು. ಅದಕ್ಕೆ 602 ಜನರು ನ್ಯಾಯಾಲಯದ ಮೊರೆ ಹೋಗಿ. ತೀರ್ಪನ್ನು ಕಾಯ್ದಿರಿಸಿ ನೇಮಕಾತಿಗೆ ಆದೇಶ ಕೋರಿದ್ದರು. ನ್ಯಾಯಾಲಯ 2024 ರ ಮಾರ್ಚ್ ನಲ್ಲಿ ಸಮ್ಮತಿಸಿತ್ತು. ಆದರೂ ನೇಮಕಾತಿ ಆದೇಶ ನೀಡಲಿಲ್ಲ. ನಂತರ ಮೇ ನಲ್ಲಿ ತೀರ್ಪು ಮರ ಪರೀಕ್ಷೆಗೆ ಆದೇಶ ನೀಡಿತು. ಅದರ ವಿರುದ್ದ ಕೆಪಿಸಿಎಲ್ ನ್ಯಾಯಾಲಯದ ಮೊರೆ ಹೋಗಿತ್ತು. ಇದರ ವಿರುದ್ದ ಆಯ್ಕೆ ಬಯಸಿದ್ದ ಅಭ್ಯರ್ಥಿಗಳು ಸುಪ್ರೀಂ ಮೊರೆ ಹೋಗಿದ್ದರು. ಅಲ್ಲಿ ಪಾಸಿಟಿವ್ ಮತ್ತು ನೆಗಟಿವ್ ಬಂದವರಿಗೆ ಕೊಡಲಿದೆಂದು ಕೆಪಿಸಿಎಲ್ ಹೇಳಿತು.

ಹೀಗೆ ಸ್ಪಷ್ಟತೆ ಇಲ್ಲದೆ ಪರೀಕ್ಷೆಗಳನ್ನು ನಡೆಸಿ ಅನೇಕರಿಗೆ ಅನ್ಯಾಯ ಮಾಡಿದೆ ಎಂದು ತಿಳಿಸಿದರು.

# ಕವಿಗಳು ಕಾಲದ ಧ್ವನಿಯಾಗಬೇಕು



**ಕಲಬುರಗಿ,ಮಾ.24–** ಕವಿಗಳು, ಸಾಹಿತಿಗಳು ಸುಮ್ಮನೆ ಕಾವ್ಯ ರಚಿಸದೆ ಸಾಮಾಜಿಕ ಜವಾಬ್ದಾರಿಯೊಂದಿಗೆ ಕಾಲದ ಧ್ವನಿಯಾಗಬೇಕು ಎಂದು ನಾಡಿನ ಪ್ರಮುಖ ಕವಿ-ಕಥೆಗಾರ ಪ್ರೋ. ಸಿ.ಎಸ್.ಆನಂದ ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಆಯೋಜಿಸಿದ್ದ "ಕವಿ ಕಂಡ ಯುಗಾದಿ" ವಿಶೇಷ ಕವಿಗೋಷ್ಠಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು , ಕವಿತೆ ರಚಿಸುವುದು ಕೇವಲ ಕವಿಯ ಭಾವನೆಗಳ ಅಭಿವ್ಯಕ್ತಿಯಲ್ಲ ಅದೊಂದು ಕ್ಲಿಷ್ಟಕರವಾದ ಸೃಜನಾತ್ಮಕ ಪ್ರಕ್ರಿಯೆ. ಕವಿ ಸಮಾಜದ ಒಂದು ಭಾಗವಾಗಿರುವುದರಿಂದ ಪ್ರಜಾಪ್ರಭುತ್ವ ಮತ್ತು ಭಾರತೀಯ ಸಂವಿಧಾನದ ಆಶಯಗಳನ್ನು ಸಂರಕ್ಷಿಸುವ ಹೊಣೆಗಾರಿಕೆಯನ್ನು ತಮ್ಮ ಹೆಗಲ ಮೇಲೆ ಹೊತ್ತುಕೊಳ್ಳಬೇಕು ಎಂದು ಸಲಹೆ ನೀಡಿದರು.

ಕವಿಗಳಾದ ಪ್ರಭು ನಿಷ್ಠಿ, ಶಕುಂತಲಾ ಪಾಟೀಲ ಜಾವಳಿ, ಜಯಶ್ರೀ ಜಮಾದಾರ, ಅಶ್ವಿನಿ ಪಾಟೀಲ, ವಿದ್ಯಾಧರ ಕಾಂಬಳೆ, ಶರಣು ಅತನೂರ, ಭೀಮರಾಯ ಹೇಮನೂರ, ಜ್ಯೋತಿ ಪಾಟೀಲ, ಶ್ರೀದೇವಿ ಪ್ರೋ.ಪಾಟೀಲ, ಕವಿತಾ .ಪಿ.ಮೋರಾ ಅವರು ವರ್ತಮಾನಕ್ಕೆ ಸ್ಪಂದಿಸುವ ಕವಿತೆ ವಾಚಿಸಿ ಪ್ರೇಕ್ಷಕರ ಗಮನ ಸೆಳೆದರು. ವೇದಿಕೆಯಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷರಾದ ವಿಜಯಕುಮಾರ ಪಾಟೀಲ ತೇಗಲತಿಪ್ಪಿ, ದಕ್ಷಿಣ ವಲಯ ಕ.ಸಾ.ಪ. ಅಧ್ಯಕ್ಷರಾದ ರವಿಕುಮಾರ ಶಹಾಪುರಕರ, ಧರ್ಮರಾಜ ಜವಳಿ ಗೌರವ ಉಪಸ್ಥಿತರಿದ್ದರು

# ದೇಶದ ಸ್ವಾತಂತ್ರಕ್ಕಾಗಿ ನಗುತಲೆ ಗಲ್ಲಿಗೇರಿದ ಕ್ರಾಂತಿಕಾರಿಗಳು: ಡಾ.ಗಾಂಧೀಜಿ ಮೋಳಕೆರೆ



**ಕಲಬುರಗಿ,ಮಾ.24–**ಭಾರತ ಮಾತೆಯನ್ನು ದಾಸ್ಯದ ಸಂಕೋಲೆಯಿಂದ ಬಿಡಿಸಲು ಹೋರಾಡಿದ ವೀರ ಕ್ರಾಂತಿಕಾರಿಗಳಾದ ಭಗತ್ ಸಿಂಗ್, ಸುಕ್‌ದೇವ್ ಮತ್ತು ರಾಜಗುರು ಅವರು ಹುತಾತ್ಮರಾದ ದಿನ. 23 ಮಾರ್ಚ್, 1931ರಂದು ಬ್ರಿಟಿಷ್ ಆಡಳಿತ ಭಾರತಾಂಬೆಯ ಈ ಮೂವರು ಸುಪುತ್ರರನ್ನು ನೇಣಿಗೇರಿಸಿತ್ತು. ಶಹೀದ್ ದಿವಸ್ ಎಂದು ಆಚರಿಸಲಾಗುವ ಇಂದಿನ ದಿನ "ಇಂಕ್ವಿಲಾಬ್ ಜಿಂದಾಬಾದ್" ಘೋಷಣೆ, ಭಾರತದ ಮೂಲೆ ಮೂಲೆಯನ್ನು ತಲುಪಿತ್ತು. ಕೇವಲ 23 ವರ್ಷದ ಮೂವರು ತರುಣರು "ಮೇರಾ ರಂಗ್ ದೇ ಬಸಂತಿ ಚೋಲಾ" ಎಂಬ ದೇಶಭಕ್ತಿ ಹಾಡನ್ನು ಹಾಡುತ್ತಾ ನೇಣುಗಂಬದತ್ತ ಹೊರಟಿದ್ದರೆ, ಸ್ವಾತಂತ್ರ್ಯ ಹೋರಾಟದ ಕಿಡಿ ಜ್ವಾಲೆಯಾಗಿ ದೇಶದ ಉದ್ದಗಲಕ್ಕೂ ಹರಡಿತ್ತು ಎಂದು ಡಾ.ಅಂಬೇಡ್ಕರ್ ಪದವಿ ಮಹಾವಿದ್ಯಾಲಯದ ಇತಿಹಾಸ ಪ್ರಾಧ್ಯಾಪಕ ಡಾ.ಗಾಂಧೀಜಿ ಮೋಳಕೆರೆ ಹೇಳಿದರು.ನಗರದ ಕೆಪಿಇ ಸಂಸ್ಥೆಯ ಡಾ. ಅಂಬೇಡ್ಕರ್ ಪದವಿ ಮಹಾವಿದ್ಯಾಲಯದಲ್ಲಿ ಸೋಮವಾರ ಆಯೋಜಿಸಿದ್ದ ಹುತಾತ್ಮರ ದಿನಾಚರಣೆಯ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಅವರು ಮಾತನಾಡಿದರು.ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ ಕಾಲೇಜಿನ ಪ್ರಾಚಾರ್ಯರಾದ ಸಿದ್ದಪ್ಪ ಎಂ. ಕಾಂತಾ ಅವರು ವಿದ್ಯಾರ್ಥಿಗಳು ದೇಶಕ್ಕಾಗಿ ಪ್ರಾಣವನ್ನು ಅರ್ಪಿಸಿದ ವೀರ ಯುವಕರನ್ನು ಸ್ಮರಿಸಿ ಅಮ್ಮ ವ್ಯಕ್ತಿತ್ವವನ್ನು ತಾವು ರೂಪಿಸಿಕೊಳ್ಳಬೇಕು ಎಂದರು.ವೇದಿಕೆ ಮೇಲೆ ಕಾಲೇಜಿನ ಅರ್ಥಶಾಸ್ತ್ರ ವಿಭಾಗದ ಪ್ರಾಧ್ಯಾಪಕರಾದ ಡಾ.ನಿರ್ಮಲಾ ಸಿರಗಾಪೂರ,ಡಾ.ಶಿವಕುಮಾರ ,ಡಾ.ಅರುಣ ಜೋಳದಕೂಡ್ಲಿಗಿ, ಶೃತಿ ಇತರರು ಇದ್ದರು.ಡಾ.ವಸಂತ ನಾಶಿ ನಿರೂಪಿಸಿದರು ಡಾ.ಹರ್ಷವರ್ಧನ ಬಿ ಸ್ವಾಗತಿಸಿದರು ಡಾ.ಸುದರ್ಶನ ಮದನ್ಕರ್ ವಂದಿಸಿದರು.

# ವಸತಿ ಶಾಲೆಗಳ 6ನೇ ತರಗತಿ ಪ್ರವೇಶ ಪರೀಕ್ಷೆ ಏಪ್ರಿಲ್ 12ಕ್ಕೆ

**ರಾಯಚೂರು:** ಇಲ್ಲಿನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2026-27ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಡಾ.ಎ.ಪಿ.ಜೆ.ಅಬ್ದುಲ್ ಕಲಾಂ ವಸತಿ ಶಾಲೆಗಳಲ್ಲಿ 6ನೇ ತರಗತಿಗೆ ಪ್ರವೇಶ ಪರೀಕ್ಷೆಯನ್ನು ಏಪ್ರಿಲ್ 12ರಂದು ಜಿಲ್ಲೆಯ ವಿವಿಧ ಪರೀಕ್ಷಾ ಕೇಂದ್ರಗಳಲ್ಲಿ ಏಕಕಾಲಕ್ಕೆ ಜರುಗಲಿದ್ದು, ಅರ್ಜಿ ಸಲ್ಲಿಸಿರುವ ಅರ್ಹ ವಿದ್ಯಾರ್ಥಿಗಳು ಈ ಪರೀಕ್ಷೆಗೆ ಕಡ್ಡಾಯವಾಗಿ ಹಾಜರಾಗುವಂತೆ ಕೋರಲಾಗಿದೆ.ಜಿಲ್ಲೆಯ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ರಾಯಚೂರು (ಬೋಳಮಾನದೊಡ್ಡಿ ರಸ್ತೆ), ಗಿಲ್ಲೇಸೂಗೂರು (ಚಂದ್ರಬಂಡಾ ರಸ್ತೆ), ಯರಮರಸ್ ಕ್ಯಾಂಪ್, ಗಿಲ್ಲೆಸುಗೂರು ಕ್ಯಾಂಪ್, ಮಾನವಿ, ಸಿಂಧನೂರು, ಚನ್ನಹಳ್ಳಿ, ಮಸ್ಕಿ, ಲಿಂಗಸೂಗೂರು, ಸಿರವಾರ, ದೇವದುರ್ಗ ಮತ್ತು ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆ, ಯರಮರಸ್ ಕ್ಯಾಂಪ್ ರಾಯಚೂರಿನಲ್ಲಿ 6ನೇ ತರಗತಿಯಿಂದ 10ನೇ ತರಗತಿಯ ವರೆಗೆ ಆಂಗ್ಲ ಮಾಧ್ಯಮದಲ್ಲಿ ವ್ಯಾಸಂಗ ಮಾಡಲು ಅಲ್ಪಸಂಖ್ಯಾತರ ಸಮುದಾಯಕ್ಕೆ ಶೇ.75 ರಷ್ಟು ಸ್ಥಾನಗಳನ್ನು ಮತ್ತು ಶೇ.25 ರಷ್ಟು ಸ್ಥಾನಗಳನ್ನು ಇತರೆ ವರ್ಗದವರಿಗೆ ಮೀಸಲಿರಿಸಿ, ಪ್ರಸ್ತುತ ಕರ್ನಾಟಕದ ಸರ್ಕಾರದ/ಅಂಗೀಕೃತ ಶಾಲೆಗಳಲ್ಲಿ 5ನೇ ತರಗತಿಯಲ್ಲಿ ಉತ್ತೀರ್ಣರಾದ ಅರ್ಹ ವಿದ್ಯಾರ್ಥಿಗಳಿಂದ 6ನೇ ತರಗತಿ ಪ್ರವೇಶಕ್ಕಾಗಿ ಅಲ್ಪಸಂಖ್ಯಾತರ ಸಮುದಾಯದವರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬುದ್ದಿಸ್ಟ್, ಸಿಖ್ ಮತ್ತು ಪಾರ್ಸಿ ಅರ್ಹ ವಿದ್ಯಾರ್ಥಿಗಳು ಮತ್ತು ಪ.ಜಾತಿ/ಪ.ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳಿಗೆ ಆನ್‌ಲೈನ್ ಸೇವಾಸಿಂಧು ವಿಳಾಸ: Website:https://sevasindhuservices.karnataka.gov.in ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿತು. ಅರ್ಜಿ ಸಲ್ಲಿಸಿರುವ ಅರ್ಹ ವಿದ್ಯಾರ್ಥಿಗಳಿಗೆ ದಿನಾಂಕ:12.04.2026 ಭಾನುವಾರದಂದು ಪ್ರವೇಶ ಪರೀಕ್ಷೆಯು ಜಿಲ್ಲೆಯ ವಿವಿಧ ಪರೀಕ್ಷಾ ಕೇಂದ್ರಗಳಲ್ಲಿ ಏಕಕಾಲಕ್ಕೆ ಜರುಗಲಿದ್ದು, ಅರ್ಜಿ ಸಲ್ಲಿಸಿರುವ ಅರ್ಹ ವಿದ್ಯಾರ್ಥಿಗಳು ಸದರಿ ಪರೀಕ್ಷೆಗೆ ಕಡ್ಡಾಯವಾಗಿ ಹಾಜರಾಗುವಂತೆ ಕೋರಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ: ಅಲ್ಪಸಂಖ್ಯಾತರ ಸಹಾಯವಾಣಿ 8277799990, 08022535902, ರಾಯಚೂರು 8496098631, 9731028420, 9731341815, 9686853719, 6361866571, 9108175899 ಅಥವಾ 9902906266, ಮಾನವಿ, ಸಿರವಾರ 7411771075, 886733478, ದೇವದುರ್ಗ 9731794252, 9148233616, ಲಿಂಗಸೂಗೂರು, ಮಸ್ಕಿ ಮತ್ತು ಸಿಂಧನೂರು 8217621732, 9740871306 ಅಥವಾ 8660879712ಗೆ ಸಂಪರ್ಕಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಕ್ಕೂರು ವಿಮಾನ ತರಬೇತಿ ಶಾಲೆ ಮುಚ್ಚುವ ಪ್ರಸ್ತಾಪವಿಲ್ಲ

**ಬೆಂಗಳೂರು, ಮಾ. 24–** ಬೆಂಗಳೂರಿನ ಜಕ್ಕೂರು ವಿಮಾನ ತರಬೇತಿ ಶಾಲೆಯನ್ನು ಮುಚ್ಚುವ ಬಗ್ಗೆಯಾಗಲೀ, ಅದನ್ನು ಬೇರೆಡೆಗೆ ವರ್ಗಾಯಿಸುವ ಬಗ್ಗೆಯಾಗಲೂ ಯಾವುದೇ ಪ್ರಸ್ತಾಪಗಳು ಸರ್ಕಾರದ ಮುಂದಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿಧಾನಸಭೆಯಲ್ಲಿಂದು ಸ್ಪಷ್ಟಪಡಿಸಿದರು.

ಬೆಂಗಳೂರಿನಲ್ಲಿ ಅಭಿವೃದ್ಧಿ ಕುಂಠಿತವಾಗಿರುವ ಬಗ್ಗೆ ನಿಯಮ-69ರ ಅಡಿ ಚರ್ಚೆಯಲ್ಲಿ ಪ್ರತಿಪಕ್ಷ ನಾಯಕ ಆರ್. ಅಶೋಕ್ ಜಕ್ಕೂರು ವಿಮಾನ ತರಬೇತಿ ಶಾಲೆಯನ್ನು ಮುಚ್ಚಲಾಗುತ್ತಿದೆ. ಇದರ ಹಿಂದೆ ಉನ್ನತ ಸ್ಥಾನದಲ್ಲಿರುವವರು ಇದ್ದಾರೆ. ರಿಯಲ್ ಎಸ್ಟೇಟ್ ಮಾಫಿಯಾಗಳಿಗೆ ಮಣಿದು ಸರ್ಕಾರ ದೇಶದ ಪ್ರತಿಷ್ಠಿತ ಜಕ್ಕೂರು ವಿಮಾನ ತರಬೇತಿ ಶಾಲೆಯನ್ನು ಮುಚ್ಚಲಾಗುತ್ತಿದೆ. ಇದನ್ನು ಉಳಿಸಬೇಕು ಎಂದು ಒತ್ತಾಯಿಸಿದ ಸಂದರ್ಭದಲ್ಲಿ ಮಧ್ಯೆ ಪ್ರವೇಶಿಸಿ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು, ಜಕ್ಕೂರು ವಿಮಾನ ತರಬೇತಿ ಶಾಲೆಯನ್ನು ಮುಚ್ಚುವ ಬಗ್ಗೆಯಾಗಲೀ, ವರ್ಗಾಯಿಸುವ ಬಗ್ಗೆಯಾಗಲೀ ಯಾವುದೇ ಪ್ರಸ್ತಾವನೆ ಬಂದಿಲ್ಲ.

ಈ ಜಾಗವನ್ನು ಪಿಪಿಪಿ ಮಾದರಿಯಲ್ಲಿ ಅಭಿವೃದ್ಧಿಪಡಿಸುವ ವಿಚಾರವೂ ಇಲ್ಲ. ಈ ಹಿಂದೆ ಜಕ್ಕೂರು ವಿಮಾನ ತರಬೇತಿ ಶಾಲೆಯನ್ನು ಪಿಪಿಪಿ ಮಾದರಿಯಲ್ಲಿ ಅಭಿವೃದ್ಧಿಪಡಿಸುವುದಕ್ಕೆ ಆ ಕ್ಷೇತ್ರದ ಶಾಸಕರು, ಈಗ ಸಚಿವರೂ ಆಗಿರುವ ಕೃಷ್ಣಬೈರೇಗೌಡ ಅವರು ಏನು ನಿಲುವು ವ್ಯಕ್ತಪಡಿಸಿದ್ದಾರೋ ಅದೇ ನಿಲುವು ಎಲ್ಲರದ್ದಾಗಿದೆ. ಮುಖ್ಯಮಂತ್ರಿಗಳು ಈ ಬಗ್ಗೆ ಚರ್ಚೆ ಮಾಡಿಲ್ಲ ಎಂದು ಹೇಳಿದರು.

ವಿಮಾನ ತರಬೇತಿ ಶಾಲೆ ಮುಚ್ಚಬೇಡಿ-ಇದಕ್ಕೂ ಮೊದಲು ವಿಷಯ ಪ್ರಸ್ತಾಪಿಸಿದ್ದ ಪ್ರತಿಪಕ್ಷ ನಾಯಕ ಆರ್. ಅಶೋಕ್, ಇಡೀ ದೇಶದಲ್ಲೇ ಮೊದಲ ವಿಮಾನ ತರಬೇತಿ ಶಾಲೆಯಾದ ಜಕ್ಕೂರಿನ ಮೇಲೆ ಉಪಮುಖ್ಯಮಂತ್ರಿ ಕಣ್ಣು ಬಿದ್ದಂತಿದೆ. ಸುಮಾರು 300 ಎಕರೆ ಜಾಗವನ್ನು ಪಿಪಿಪಿ ಮಾದರಿಯಲ್ಲಿ ಎಕ್ಸಿಕ್ಯೂಟಿವ್ ಕ್ಲಬ್ ಮಾಡುವ ಬಗ್ಗೆ ಚರ್ಚೆ ನಡೆದಿದೆ. ಈ ಶಾಲೆಯನ್ನು ವರ್ಗಾಯಿಸುವ ಬಗ್ಗೆ ಅಧಿಕಾರಿಗಳ ಸಭೆಯು ನಡೆದಿದೆ. ಈ ಹಿಂದೆ ಪ್ರತಿಪಕ್ಷದಲ್ಲಿದ್ದಾಗ ಸಚಿವ ಕೃಷ್ಣಬೈರೇಗೌಡ ಅವರು ಜಕ್ಕೂರು ವೈಮಾನಿಕ ಶಾಲೆಯನ್ನು ಪಿಪಿಪಿ ಮಾದರಿಯಲ್ಲಿ ಅಭಿವೃದ್ಧಿಪಡಿಸುವುದಕ್ಕೆ ವಿರೋಧ ವ್ಯಕ್ತಪಡಿಸಿ, ಇದೊಂದು ದೊಡ್ಡ ಹಗರಣ ಎಂದೆಲ್ಲಾ ಹೇಳಿದ್ದರು. ಈಗ ಅವರು ಆಡಳಿತ ಪಕ್ಷಕ್ಕೆ ಪ್ಲೈ ಆಗುತ್ತಿದ್ದಂತೆಯೇ ಪ್ಲೈಯಿಂಗ್ ಸ್ಕೂಲ್‌ನ್ನು ಪ್ಲೈ ಮಾಡಲಾಗುತ್ತಿದೆ ಎಂದು ದೂರಿದ್ದರು.

ಈ ವೈಮಾನಿಕ ಶಾಲೆಗೆ ಅಂದಿನ ಮಹಾರಾಜರು ಅರಣ್ಯ ಭೂಮಿಯನ್ನು ಡಿನೋಟಿಫೈ ಮಾಡಿ ನೀಡಿದ್ದರು. ಈ ವೈಮಾನಿಕ ಶಾಲೆಗೆ ಅಂದಿನ ಪ್ರಧಾನಿ ನೆಹರು ರವರು ಶಿಲಾನ್ಯಾಸ ಮಾಡಿದ್ದರು. ನೆಹರು ರವರು ಹಾಕಿದ್ದ ಅಡಿಗಲ್ಲನ್ನೇ ಈ ಸರ್ಕಾರ ಕಿತ್ತು ಹಾಕುವ ಪ್ರಯತ್ನ ನಡೆಸಿದೆ. ಇದು ಸರಿಯಲ್ಲ. ಜಕ್ಕೂರು ವೈಮಾನಿಕ ಶಾಲೆಯನ್ನು ಮುಚ್ಚಿ ಆ ಭಾಗದಲ್ಲಿ ಗಗನಚುಂಬಿ ಕಟ್ಟಡಗಳನ್ನು ನಿರ್ಮಿಸಲು ರಿಯಲ್ ಎಸ್ಟೇಟ್ ಮಾಫಿಯಾಗೆ ಅನುಕೂಲ ಮಾಡಿಕೊಡುವ ಉದ್ದೇಶ ಇದರಲ್ಲಿ ಅಡಗಿದೆ ಎಂದು ದೂರಿದ್ದರು.ಈ ಹಂತದಲ್ಲಿ ಮಧ್ಯೆ ಪ್ರವೇಶಿಸಿ ಮಾತನಾಡಿದ ಇಂಧನ ಸಚಿವ ಜಾರ್ಜ್ ಅವರು, ಜಕ್ಕೂರು ಶಾಲೆಯನ್ನು ಬೇರೆ ಕಡೆಗೆ ವರ್ಗಾಯಿಸಿ ಆ ಜಾಗದಲ್ಲಿ ಒಂದು ಕ್ರೀಡಾ ಸಂಕೀರ್ಣವನ್ನು ನಿರ್ಮಿಸಬೇಕು ಎಂದು ನಾನೇ ಪತ್ರ ಬರೆದಿದ್ದೆ. ಆದರೆ ಸಚಿವ ಸಂಪುಟದಲ್ಲಿ ತೀರ್ಮಾನವಾಗಿಲ್ಲ ಎಂದು ಹೇಳಿದರು.

ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಪ್ರತಿಪಕ್ಷ ನಾಯಕ ಆರ್. ಅಶೋಕ್, ಕ್ರೀಡಾ ಸಂಕೀರ್ಣ ಮಾಡುವುದಾದರೆ ಬೇರೆಡೆ ಮಾಡಿ. ವೈಮಾನಿಕ ತರಬೇತಿ ಶಾಲೆಯನ್ನು ಮುಚ್ಚಿ ಕ್ರೀಡಾ ಸಂಕೀರ್ಣ ಮಾಡುವ ಅಗತ್ಯವೇನಿದೆ. ಇದರ ಹಿಂದೆ ಉನ್ನತ ಸ್ಥಾನದಲ್ಲಿರುವವರ




ಲಾಬಿ ಇದೆ. ರಾಜಸ್ಥಾನದಿಂದ ಅಭಿವೃದ್ಧಿ ಮಾಡಲು ಜನ ಬರುತ್ತಾರಂತೆ. ನಮಗೂ ಎಲ್ಲವೂ ಗೊತ್ತಿದೆ ಎಂದು ಹೇಳಿ, ಉಪಮುಖ್ಯಮಂತ್ರಿಗಳ ಗಮನಕ್ಕೆ ತಾರದೇ ಇಷ್ಟೆಲ್ಲಾ ಲಾಬಿ ನಡೆದಿರುವುದು ನಿಜಕ್ಕೂ ಆಶ್ಚರ್ಯ ಎಂದು ಹೇಳಿದಾಗ, ಇದಕ್ಕೆ ದನಿಗೂಡಿಸಿದ ಬಿಜೆಪಿಯ ಸುನೀಲ್‌ಕುಮಾರ್ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರವರ ಕ್ಷಿಪಣಿಗಳಿಗೆ ಸಿಗದ ಈ ರಾಡರ್ ಯಾರದ್ದು, ಆ ತಂತ್ರಜ್ಞಾನ ನಮಗೂ ಬೇಕು ಎಂದು ಹೇಳಿದರು.

# ಎಸ್ ಎಸ್ ಎಲ್ ಸಿ ಪರೀಕ್ಷಾ ಕೇಂದ್ರ, ವೆಬ್ ಕಾಸ್ಟಿಂಗ್ ಕೇಂದ್ರಕ್ಕೆ ಜಿಪಂ ಸಿಇಒ ರಿಷಿ ಆನಂದ ಭೇಟಿ



**ವಿಜಯಪುರ, ಮಾ. 24**: ಎಸ್ಸೆಸ್ಸೆಲ್ಸಿ ಪರೀಕ್ಷೆ ಯಶಸ್ವಿ ಹಾಗೂ ಪಾರದರ್ಶಕವಾಗಿ ನಡೆಯುವ ನಿಟ್ಟಿನಲ್ಲಿ ವಿಜಯಪುರ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಿಷಿ ಆನಂದ ಅವರು ಸೋಮವಾರ ನಗರದ ವಿವಿಧ ಪರೀಕ್ಷಾ ಕೇಂದ್ರಗಳಿಗೆ ಹಾಗೂ ಪರೀಕ್ಷಾ ವೆಬ್ ಕಾಸ್ಟಿಂಗ್ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಮಿನಿ ಸಭಾಂಗಣದಲ್ಲಿ ಸ್ಥಾಪಿಸಲಾದ ಜಿಲ್ಲಾ ವೆಬ್ ಕಾಸ್ಟಿಂಗ್ ಕೇಂದ್ರಕ್ಕೆ ಭೇಟಿ ನೀಡಿ, ಜಿಲ್ಲೆಯಾದ್ಯಂತ ನಡೆಯುತ್ತಿರುವ ಪರೀಕ್ಷೆಗಳ ನೇರ ವೀಕ್ಷಣಾ ವ್ಯವಸ್ಥೆಯನ್ನು ಪರಿಶೀಲಿಸಿದರು. ತಾಂತ್ರಿಕ ವ್ಯವಸ್ಥೆಗಳು ದೋಷ ರಹಿತವಾಗಿ ಕಾರ್ಯ ನಿರ್ವಹಿಸುವಂತೆ ನಿರಂತರ ನಿಗಾವಹಿಸಬೇಕು ಎಂದು ಸೂಚಿಸಿದರು.

ಬಳಿಕ ಶಾಮ್ಸ್ ಪ್ರೌಢಶಾಲೆ, ಬಂಜಾರ ಪ್ರೌಢ ಶಾಲೆ ಹಾಗೂ ಚೇತನಾ ಪದವಿಪೂರ್ವ ಕಾಲೇಜುಗಳಿಗೆ ಭೇಟಿ ನೀಡಿ, ಪರಿಶೀಲಿಸಿದರು.

ಪರೀಕ್ಷಾ ವ್ಯವಸ್ಥೆಯನ್ನು ವೀಕ್ಷಿಸಿದ ಜಿಪಂ ಸಿಇಒ ರಿಷಿ ಆನಂದ ಅವರು, ವಿದ್ಯಾರ್ಥಿಗಳು ಯಾವುದೇ ಆತಂಕವಿಲ್ಲದೆ ಪರೀಕ್ಷೆ ಬರೆಯುವಂತಾಗಲು ಸೂಕ್ತ ವಾತಾವರಣ ಕಲ್ಪಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಪರೀಕ್ಷಾ ಕೇಂದ್ರಗಳಲ್ಲಿ ಅಳವಡಿಸಿರುವ ಸಿಸಿಟಿವಿ ಕ್ಯಾಮರಾಗಳು, ವೆಬ್ ಕಾಸ್ಟಿಂಗ್ ವ್ಯವಸ್ಥೆ, ಪ್ರಥಮ ಚಿಕಿತ್ಸಾ ಕಿಟ್ ಹಾಗೂ ಕುಡಿಯುವ ನೀರು, ಶೌಚಾಲಯ ಸೇರಿದಂತೆ ಮೂಲಭೂತ ಸೌಕರ್ಯಗಳ ಸ್ಥಿತಿಗತಿಯನ್ನು ಪರಿಶೀಲಿಸಿ, ಎಲ್ಲವೂ ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿರುವುದನ್ನು ಖಚಿತಪಡಿಸಿಕೊಂಡರು.

ಇದೇ ಸಂದರ್ಭದಲ್ಲಿ ಪರೀಕ್ಷಾ ಅವಧಿಯಲ್ಲಿ ಯಾವುದೇ ರೀತಿಯ ಅಕ್ರಮಗಳು ನಡೆಯದಂತೆ ಕಟ್ಟುನಿಟ್ಟಿನ ಮೇಲ್ವಿಚಾರಣೆ ವಹಿಸಬೇಕು. ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ಅನಧಿಕೃತ ವ್ಯಕ್ತಿಗಳ ಸಂಚಾರವನ್ನು ನಿಯಂತ್ರಿಸಬೇಕು ಎಂದರು.

ಪರೀಕ್ಷಾ ಪ್ರಶ್ನೆಪತ್ರಿಕೆಗಳ ಸುರಕ್ಷಿತ ವಿತರಣೆಯ ಬಗ್ಗೆ ವಿಶೇಷ ಗಮನ ಹರಿಸಬೇಕು ಹಾಗೂ ಸಮಯಪಾಲನೆ ಕಟ್ಟುನಿಟ್ಟಾಗಿ ಅನುಸರಿಸಬೇಕು. ಪರೀಕ್ಷಾ ಕರ್ತವ್ಯದಲ್ಲಿರುವ ಸಿಬ್ಬಂದಿ ತಮ್ಮ ಜವಾಬ್ದಾರಿಯನ್ನು ನಿಷ್ಠೆಯಿಂದ ನಿರ್ವಹಿಸಿ, ಯಾವುದೇ ಲೋಪ ಉಂಟಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ನಿರ್ದೇಶನ ನೀಡಿದರು.

ಪರೀಕ್ಷಾ ಕರ್ತವ್ಯದಲ್ಲಿರುವ ಸಿಬ್ಬಂದಿಗೆ ಸೂಚನೆ ನೀಡಿ, ಪರೀಕ್ಷೆಗಳು ಸುಸೂತ್ರವಾಗಿ ಹಾಗೂ ಯಾವುದೇ ಅಡಚಣೆ ಇಲ್ಲದೆ ನಡೆಯಲು ಇಲಾಖೆಯ ಎಲ್ಲ ಅಧಿಕಾರಿಗಳ ಸಮನ್ವಯ ಅತ್ಯವಶ್ಯಕವಾಗಿದ್ದು, ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಅತ್ಯಂತ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು ಎಂದು ಸಿಇಒ ತಿಳಿಸಿದರು.

ಈ ಸಂದರ್ಭದಲ್ಲಿ ಎಸ್ ಎಸ್ ಎಲ್ ಸಿ ಜಿಲ್ಲಾ ನೋಡೆಲ್ ಅಧಿಕಾರಿಗಳಾದ ಟಿ. ಎಸ್. ಕೊಲ್ಹಾರ, ಜಿಲ್ಲೆಯ ಎಲ್ಲಾ ವಲಯಗಳ ಮುಖ್ಯಸ್ಥರು ಹಾಗೂ ಪರೀಕ್ಷಾ ವೆಬ್ ಕಾಸ್ಟಿಂಗ್ ವೀಕ್ಷಕರು, ಪರೀಕ್ಷಾ ಕೇಂದ್ರಗಳ ಮೇಲ್ವಿಚಾರಕರು, ಪೋಲಿಸ್ ಸಿಬ್ಬಂದಿ, ಆರೋಗ್ಯ ಕಾರ್ಯಕರ್ತರು ಹಾಗೂ ಇತರೆ ಸಿಬ್ಬಂದಿಯವರು ಉಪಸ್ಥಿತರಿದ್ದರು.

# ಅಕಾಲಿಕ ಮಳೆ : 3 ದಿನದೊಳಗೆ ಜಂಟಿ ಸಮೀಕ್ಷೆ ನಡೆಸಿ ಹಾನಿ ವರದಿ ಸಲ್ಲಿಸಲು ಜಿಲ್ಲಾಧಿಕಾರಿ ಡಾ. ಆನಂದ ಸೂಚನೆ

**ವಿಜಯಪುರ, ಮಾ.24:** ಇತ್ತೀಚೆಗೆ ಬೀಸಿದ ಬಿರುಗಾಳಿ ಹಾಗೂ ಆಲಿಕಲ್ಲು ಮಳೆಯಿಂದಾಗಿ ಕೃಷಿ, ತೋಟಗಾರಿಕಾ ಬೆಳೆ ಹಾನಿಗೆ ಸಂಬಂಧಿಸಿದಂತೆ ಜಂಟಿ ಸಮೀಕ್ಷೆ ಕೈಗೊಂಡು ಮೂರು ದಿನದೊಳಗಾಗಿ ವರದಿ ಸಲ್ಲಿಸಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ಅಧಿಕಾರಿಗಳಿಗೆ ಸೂಚಿಸಿದರು.

ಕೃಷಿ, ತೋಟಗಾರಿಕೆ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳು ಹಾಗೂ ಬೆಳೆ ವಿಮಾ ಕಂಪನಿಯ ಅಧಿಕಾರಿಗಳೊಂದಿಗೆ ಜಿಲ್ಲಾಧಿಕಾರಿ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಅವರು ಈ ಸೂಚನೆ ನೀಡಿದರು.

ಕಂದಾಯ, ಕೃಷಿ ಹಾಗೂ ತೋಟಗಾರಿಕೆ ಇಲಾಖೆ ಅಧಿಕಾರಿಗಳ ತಂಡ ರಚಿಸಿ ಹಾನಿಗೊಳಗಾದ ಕ್ಷೇತ್ರಗಳಿಗೆ ಭೇಟಿ ನೀಡಿ ನಿಖರವಾದ ಸಮೀಕ್ಷೆ ಕೈಗೊಂಡು 3 ದಿನಗೊಳಗಾಗಿ ಜಂಟಿ ಸಮೀಕ್ಷೆ ನಡೆಸಿ ವರದಿಯನ್ನು ನೀಡಬೇಕು ಎಂದು ಸೂಚಿಸಿದರು.

ಇತ್ತೀಚಿನ ದಿನಗಳಲ್ಲಿ ಬಿದ್ದ ಮಳೆ, ಗಾಳಿ ಹಾಗೂ ಆಲಿಕಲ್ಲು ಮಳೆಯಿಂದಾಗಿ ಕೃಷಿ ಬೆಳೆ ಹಾನಿಗೊಳಗಾದ ರೈತರು ಬೆಳೆ ವಿಮೆ ಮಾಡಿಸಿದ್ದರೆ ಅಂತಹ ರೈತರು ಮುಂದಿನ 3 ದಿನಗೊಳಗಾಗಿ (ಮುಂದಿನ 72 ಗಂಟೆಗೂಳಗಾಗಿ) ಓರಿಯಂಟಲ್ ಜನರಲ್ ಇನ್ಸೂರನ್ಸ್ ಕಂಪನಿ ಖಿಂಟಟ ಈಡಿಜಜ ಓಣಟಭಜಡಿ 1800 425 6678 ಗೆ ಕರೆ ಮಾಡಿ ವೈಯಕ್ತಿಕ ಸ್ಥಳ ನಿರ್ದಿಷ್ಟ ವಿಕೋಪಗಳ (ಖಐಐಂ) ಕುರಿತು ದೂರು ದಾಖಲಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.



2025-26 ನೇ ಸಾಲಿನ ಖಘಃಅಖಖ ಯೋಜನೆಯಡಿ ದ್ರಾಕ್ಷಿ, ದಾಳಿಂಬೆ ಹಾಗೂ ಲಿಂಬೆ ಬೆಳೆಗಳಿಗೆ ಆಲಿಕಲ್ಲು ಮಳೆಯಿಂದಾಗಿ ಬೆಳೆಹಾನಿ ಸಂಭವಿಸಿದ್ದಲ್ಲಿ, ವಿಮೆ ಮಾಡಿಸಿದ ಬೆಳೆಯ ವಿವರಗಳನ್ನು ಹಾಗೂ ಮಾಹಿತಿಯನ್ನು 72 ಗಂಟೆಗಳೊಳಗಾಗಿ ಅಗ್ರಿಕಲ್ಚರ್ ಇನ್ಸುರನ್ಸ್ ಕಂಪನಿ ಆಪ್ ಇಂಡಿಯಾ ಲಿ. ರವರಿಗೆ ಖಿಂಟಟ ಈಡಿಜಜ ಓಣಟಭಜಡಿ 1800 425 0505 ಗೆ ಕರೆ ಮಾಡಿ ರೈತರು ಮಾಹಿತಿ ನೀಡಬಹುದಾಗಿದೆ ಎಂದರು.

ವಿಮಾ ಕಂಪನಿಯ ಅಧಿಕಾರಿಗಳು ಹಾಗೂ ಎಲ್ಲಾ ಇಲಾಖಾ ಅಧಿಕಾರಿಗಳು 3 ದಿನಗಳೊಳಗಾಗಿ ಜಂಟಿ ಸಮೀಕ್ಷೆ ಕೈಗೊಂಡು ವರದಿ ನೀಡುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದರು.

# ಗ್ರಾಹಕರ ಹಕ್ಕುಗಳ ಅರಿವು ಅತ್ಯಗತ್ಯ: ನ್ಯಾಯಾಧೀಶ ಸುಶಾಂತ ಚೌಗಲೆ



**ಜಮಖಂಡಿ ಮಾ.24:**ವಿಶ್ವ ಗ್ರಾಹಕರ ದಿನಾಚರಣೆಯನ್ನು ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿಯೂ ಆಚರಿಸಲಾಗುತ್ತದೆ ಎಂದು ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶ ಸುಶಾಂತ ಮಹಾವೀರ ಚೌಗಲೆ ಹೇಳಿದರು.

ನಗರದ ತಾಲೂಕು ಆಡಳಿತ ಸೌಧದ ಸಭಾಭವನದಲ್ಲಿ ಆಯೋಜಿಸಿದ್ದ ವಿಶ್ವ ಗ್ರಾಹಕರ ದಿನಾಚರಣೆ ಹಾಗೂ ಕಾನೂನು ಅರಿವು ನೆರವು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಪ್ರತಿಯೊಬ್ಬ ಗ್ರಾಹಕನು ತನ್ನ ಹಕ್ಕುಗಳನ್ನು ಅರಿತುಕೊಳ್ಳುವುದು ಅತ್ಯಂತ ಮುಖ್ಯವಾಗಿದೆ ಎಂದರು.

ವ್ಯಾಪಾರ-ವ್ಯವಹಾರಗಳಲ್ಲಿ ಗ್ರಾಹಕರಿಗೆ ಅನ್ಯಾಯವಾಗದಂತೆ ಕಾಯ್ದೆ-ಕಾನೂನುಗಳು ಅವರ ಹಕ್ಕುಗಳನ್ನು ರಕ್ಷಿಸುತ್ತವೆ ಎಂದು ತಿಳಿಸಿದರು.

ಪ್ರತಿಯೊಬ್ಬ ಗ್ರಾಹಕರಿಗೂ ಸಮಾನ ಹಕ್ಕುಗಳಿದ್ದು, ಸರಿಯಾದ ಬೆಲೆಯಲ್ಲಿ ಗುಣಮಟ್ಟದ ವಸ್ತುಗಳು ದೊರಕಬೇಕು ಎಂಬ ಉದ್ದೇಶದಿಂದ ಸರ್ಕಾರ ಹಾಗೂ ಕಾನೂನು ಸೇವಾ ಪ್ರಾಧಿಕಾರವು ವಿವಿಧ ಮಟ್ಟಗಳಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದೆ ಎಂದು ಹೇಳಿದರು.

"ನಾವೆಲ್ಲರೂ ಗ್ರಾಹಕರೇ. ಒಂದು ಸಣ್ಣ ವಸ್ತು ಖರೀದಿಸಿದರೂ ನಾವು ಗ್ರಾಹಕರಾಗುತ್ತೇವೆ. ಆದ್ದರಿಂದ ಎಚ್ಚರಿಕೆಯಿಂದಿದ್ದು, ಸಂಬಂಧಿತ ಕಾಯ್ದೆಗಳ ಬಗ್ಗೆ ತಿಳಿದುಕೊಳ್ಳಬೇಕು" ಎಂದು ಅವರು ಸಲಹೆ ನೀಡಿದರು.ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತಹಶೀಲ್ದಾರ ಅನೀಲ ಬಡಗೇರ ಮಾತನಾಡಿ, ಕಡಿಮೆ ಗುಣಮಟ್ಟದ ವಸ್ತುಗಳು ಹಾಗೂ ಸೇವೆಗಳ ಮೂಲಕ ಗ್ರಾಹಕರು ಅನ್ಯಾಯಕ್ಕೆ ಒಳಗಾಗುವ ಸಾಧ್ಯತೆ ಇದೆ. ಇಂತಹ ಸಂದರ್ಭಗಳಲ್ಲಿ ಕಾನೂನಿನಡಿ ನ್ಯಾಯ ಪಡೆಯುವ ಮಾರ್ಗಗಳ ಬಗ್ಗೆ ಅರಿವು ಅಗತ್ಯ ಎಂದು ಹೇಳಿದರು.

ವಸ್ತುಗಳನ್ನು ಖರೀದಿಸುವಾಗ ಅವುಗಳ ತಯಾರಿಕಾ ದಿನಾಂಕ, ಅವಧಿ (ಎಕ್ಸ್ಪೈರಿ ಡೇಟ್), ತೂಕ ಹಾಗೂ ಗುಣಮಟ್ಟವನ್ನು ಪರಿಶೀಲಿಸಬೇಕು. ಗ್ರಾಹಕರು ಜಾಗೃತರಾಗಿದ್ದರೆ ಮಾತ್ರ ವ್ಯಾಪಾರಿಗಳು ಹೊಣೆಗಾರಿಕೆಯಿಂದ ನಡೆದುಕೊಳ್ಳುತ್ತಾರೆ ಎಂದು ತಿಳಿಸಿದರು.

ನ್ಯಾಯವಾದಿಗಳಾದ ಎಸ್.ಬಿ. ಕಾಳೆ ಹಾಗೂ ಲಕ್ಷ್ಮೀ ಸವದಿ ಗ್ರಾಹಕರ ಹಕ್ಕುಗಳು ಮತ್ತು ಪರಿಹಾರ ಕ್ರಮಗಳ ಕುರಿತು ಉಪನ್ಯಾಸ ನೀಡಿದರು. ಕಸ್ತೂರಿ ಜೈನಾಪುರ ಸ್ವಾಗತಿಸಿ ವಂದಿಸಿದರು.

ಕಾರ್ಯಕ್ರಮದಲ್ಲಿ ತಾಲೂಕು ಕಾನೂನು ಸೇವಾ ಸಮಿತಿ ಸದಸ್ಯ ಕಾರ್ಯದರ್ಶಿ ಹಾಗೂ ಹೆಚ್ಚುವರಿ ಸಿವಿಲ್ ನ್ಯಾಯಾಧೀಶೆ ಶ್ರೀದೇವಿ, ಆಹಾರ ಸಿರಸ್ತೆದಾರ ಬಸವರಾಜ ತಾಳಿಕೊಟಿ, ಆಹಾರ ನಿರೀಕ್ಷಕ ಆನಂದ ರಾಠೋಡ, ಸುರೇಶ ಕುರಿ, ನ್ಯಾಯಾಲಯದ ಸಿಬ್ಬಂದಿ ಮಂಜುನಾಥ ಡಿ., ಮಹೇಶ್ ಪಾಟೀಲ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಅಕ್ರಮ ಸಂಬಂಧ: ಪ್ರಿಯಕರನಿಂದ ಪತಿಯ ಹತ್ಯೆ

**ಯಾದಗಿರಿ,ಮಾ. 24:** ಪತ್ನಿಯೊಂದಿಗೆ ಅಕ್ರಮ ಸಂಬಂಧದ ವಿಚಾರವಾಗಿ ಉಂಟಾದ ವೈಷಮ್ಯ ಕೊನೆಗೆ ಪತಿಯ ಹತ್ಯೆಗೆ ಕಾರಣವಾದ ಘಟನೆ ಯಾದಗಿರಿ ತಾಲೂಕಿನ ಎಂ. ಹೊಸಹಳ್ಳಿ ಮುಖ್ಯರಸ್ತೆಯಲ್ಲಿ ನಡೆದಿದೆ. ತಾಲೂಕಿನ ಚಾಮನಹಳ್ಳಿ ತಾಂಡದ ನಿವಾಸಿ ಸಾಗರ್ ರಾಠೋಡ್ (30) ಮೃತ ವ್ಯಕ್ತಿ. ಇದೇ ಗ್ರಾಮದ ರೆಡ್ಡಿ ರಾಠೋಡ್ ಮೇಲೆ ಹತ್ಯೆ ಆರೋಪ ಕೇಳಿಬಂದಿದ್ದು, ಆರೋಪಿಯನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ಮುಂದುವರೆಸಿದ್ದಾರೆ.



ಪೊಲೀಸರ ಪ್ರಾಥಮಿಕ ಮಾಹಿತಿಯ ಪ್ರಕಾರ, ಕಳೆದ ಸುಮಾರು ಒಂದು ವರ್ಷದಿಂದ ಮೃತನ ಪತ್ನಿಯೊಂದಿಗೆ ಆರೋಪಿಗೆ ಅಕ್ರಮ ಸಂಬಂಧವಿದ್ದುದಾಗಿ ತಿಳಿದುಬಂದಿದೆ. ಈ ಹಿನ್ನೆಲೆ ಸಾಗರ್ ಮತ್ತು ರೆಡ್ಡಿ ನಡುವೆ ಹಲವಾರು ಬಾರಿ ಗಲಾಟೆಗಳು ನಡೆದಿದ್ದು, ಇಬ್ಬರ ಮಧ್ಯೆ ದ್ವೇಷ ಹೆಚ್ಚುತ್ತಲೇ ಇತ್ತು ಎನ್ನಲಾಗಿದೆ. ಘಟನೆ ನಡೆದ ದಿನವೂ ಇದೇ ವಿಚಾರವಾಗಿ ಇಬ್ಬರ ನಡುವೆ ಮಾತಿನ ಚಕಮಕಿ ಉಂಟಾಗಿ, ಬಳಿಕ ವಾಗ್ವಾದ ತೀವ್ರಗೊಂಡು ಹಿಂಸಾತ್ಮಕ ರೂಪ ಪಡೆದು ಕೊಲೆಯಾಗಿ ಅಂತ್ಯಗೊಂಡಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಹತ್ಯೆಯ ಬಳಿಕ ಘಟನೆಗೆ ಅಪಘಾತದ ರೂಪ ನೀಡಲು ಆರೋಪಿಯು ಯತ್ನಿಸಿದ್ದಾನೆ ಎಂಬ ಶಂಕೆ ವ್ಯಕ್ತವಾಗಿದೆ. ಮೃತದೇಹವನ್ನು ಸ್ಥಳಾಂತರಿಸುವುದು ಹಾಗೂ ವಾಹನಕ್ಕೆ ಹಾನಿ ಉಂಟುಮಾಡಿರುವುದು ಇದಕ್ಕೆ ಸೂಚಕವೆಂದು ತನಿಖಾ ಮೂಲಗಳು ಹೇಳಿವೆ.

ಆದರೆ ಸ್ಥಳದಲ್ಲಿದ್ದ ಸುಳಿವುಗಳು ಮತ್ತು ಪರಿಸ್ಥಿತಿಗಳ ವೈಪರಿತ್ಯ ಗಮನಿಸಿದ ಪೊಲೀಸರು ಪ್ರಕರಣವನ್ನು ಗಂಭೀರವಾಗಿ ತನಿಖೆ ನಡೆಸಿ ಆರೋಪಿಯನ್ನು ವಶಕ್ಕೆ ಪಡೆದಾಗ ನಿಜಾಂಶ ಬಹಿರಂಗವಾಗಿದೆ.

ಪ್ರಾಥಮಿಕ ತನಿಖೆಯಲ್ಲಿ ಪೂರ್ವಯೋಜಿತವಾಗಿ ಹತ್ಯೆ ನಡೆಸಿರುವ ಸಾಧ್ಯತೆಗಳನ್ನೂ ಪೊಲೀಸರು ಪರಿಶೀಲಿಸುತ್ತಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ ಇನ್ನಷ್ಟು ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ಘಟನೆ ಗ್ರಾಮದಲ್ಲಿ ಆತಂಕ ಮತ್ತು ಚರ್ಚೆಗೆ ಕಾರಣವಾಗಿದ್ದು, ಕುಟುಂಬದ ಒಳ ಕಲಹ ಇಂತಹ ದುರಂತಕ್ಕೆ ದಾರಿ ಮಾಡಿಕೊಟ್ಟಿರುವುದು ವಿಷಾದನೀಯವೆಂದು ಸ್ಥಳೀಯರು ಅಭಿಪ್ರಾಯಪಟ್ಟಿದ್ದಾರೆ. ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ವಿಧಿಸಬೇಕು ಎಂಬ ಒತ್ತಾಯವೂ ವ್ಯಕ್ತವಾಗಿದೆ.

ಈ ಕುರಿತು ಯಾದಗಿರಿ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರಿದಿದೆ.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE